ಸಂಪುಟ : 11 ಸಂಚಿಕೆ: 89 ಪುಟ : 4+2 ಬೆಲೆ: 3.00 ಶುಕ್ರವಾರ ಮೇ 08 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 89 Pages : 4+2 Price : 3.00 Friday May 8 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಮೇ-ಜೂನ್ ಮಾಹೆಗಳ ಪಡಿತರ ಆಹಾರ ಧಾನ್ಯ ವಿತರಣೆ ಆರಂಭ

■ವಿಜಯಸಾಕ್ಷಿ ಸುದ್ದಿ, ಗದಗ

ಮೇ–2026ನೇ ಮಾಹೆಯಲ್ಲಿ ಜಿಲ್ಲೆಯ ಪಡಿತರ ಆಹಾರ ಧಾನ್ಯ ವಿತರಣೆಯನ್ನು ಕೇಂದ್ರ ವ್ಯಾಪ್ತಿಯ ಎನ್.ಎಫ್.ಎಸ್.ಎ ವರ್ಗದಡಿ ಕೈಗೊಳ್ಳಲಾಗುತ್ತಿದ್ದು, ಮೇ ಹಾಗೂ ಜೂನ್–2026 ಎರಡೂ ಮಾಹೆಗಳ ಪಡಿತರವನ್ನು ಜಿಲ್ಲೆಯ 366 ನ್ಯಾಯಬೆಲೆ ಅಂಗಡಿಗಳ ಮೂಲಕ ವಿತರಿಸಲಾಗುತ್ತಿದೆ.

ಅಂತ್ಯೋದಯ ಪಡಿತರ ಚೀಟಿದಾರರಿಗೆ ಪ್ರತಿ ಕಾರ್ಡಿಗೆ ಮೇ ಮಾಹೆಗೆ 35 ಕೆ.ಜಿ ಹಾಗೂ ಜೂನ್ ಮಾಹೆಗೆ 35 ಕೆ.ಜಿ ಸೇರಿ ಒಟ್ಟು 70 ಕೆ.ಜಿ ಅಕ್ಕಿ ವಿತರಿಸಲಾಗುತ್ತದೆ.

ಆದ್ಯತಾ (ಬಿಪಿಎಲ್) ಪಡಿತರ ಚೀಟಿ–ದಾರರಿಗೆ ಪ್ರತಿ ಸದಸ್ಯರಿಗೆ ಮೇ ಮಾಹೆಗೆ 5 ಕೆ.ಜಿ ಹಾಗೂ ಜೂನ್ ಮಾಹೆಗೆ 5 ಕೆ.ಜಿ ಸೇರಿ ಒಟ್ಟು 10 ಕೆ.ಜಿ ಅಕ್ಕಿಯನ್ನು ವಿತರಿಸಲಾಗುವುದು. ಮೇ–2026ನೇ ಮಾಹೆಯಲ್ಲಿ ಕೇಂದ್ರ ವ್ಯಾಪ್ತಿಯ ಎನ್.ಎಫ್.ಎಸ್.ಎ ಯೋಜನೆಯಡಿ ಮೇ ಮತ್ತು ಜೂನ್ ಎರಡೂ ಮಾಹೆಗಳ ಪಡಿತರ ಆಹಾರ ಧಾನ್ಯ ವಿತರಣೆ ನಡೆಯುತ್ತಿರುವುದರಿಂದ, ಎಲ್ಲ ಅರ್ಹ ಫಲಾನುಭವಿಗಳು ತಮ್ಮ ವ್ಯಾಪ್ತಿಯ ನ್ಯಾಯಬೆಲೆ ಅಂಗಡಿಗಳಿಗೆ ತೆರಳಿ ಪ್ರತಿ ಮಾಹೆಗೆ ಪ್ರತ್ಯೇಕವಾಗಿ ಬೆರಳಚ್ಚು ನೀಡಿ ಪಡಿತರವನ್ನು ಪಡೆಯಬೇಕೆಂದು ಜಿಲ್ಲಾಧಿಕಾರಿ ಸಿ. ಎನ್. ಶ್ರೀಧರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮುಕ್ತಿಮಂದಿರಕ್ಕೆ ಬೊಮ್ಮಾಯಿ ಭೇಟಿ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕಿನ ಮುಕ್ತಿಮಂದಿರ ಸುಕ್ಷೇತ್ರಕ್ಕೆ ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಭೇಟಿ ನೀಡಿ, ಲಿಂಗೈಕ್ಯ ಶ್ರೀ ವೀರಗಂಗಾಧರ ಜಗದ್ಗುರುಗಳ ಗದ್ದುಗೆ ಹಾಗೂ ಬಾಳೇಹೊನ್ನೂರಿನ ಜಗದ್ಗುರು ಪ್ರಸನ್ನ ರೇಣುಕ ಡಾ. ವೀರಸೋಮೇಶ್ವರ ಜಗದ್ಗುರುಗಳ ಆಶೀರ್ವಾದ ಪಡೆದುಕೊಂಡರು.

ಈ ವೇಳೆ ಮಾತನಾಡಿದ ಅವರು, ಲಿಂಗೈಕ್ಯ ಶ್ರೀ ವೀರಗಂಗಾಧರ ಜಗದ್ಗುರುಗಳ ಸತ್ ಸಂಕಲ್ಪದಂತೆ ಈ ಪುಣ್ಯಭೂಮಿಯಲ್ಲಿ ತ್ರಿಕೋಟಿ ಶಿವಲಿಂಗ ಸ್ಥಾಪನೆ ಕಾರ್ಯ ಭಕ್ತಕುಲಕೋಟಿಯ ಸಹಾಯ–ಸಹಕಾರದೊಂದಿಗೆ ನಡೆಯುತ್ತಿರುವುದು ಸಂತಸ ತಂದಿದೆ ಎಂದು ಹೇಳಿದರು.

ಈ ಮಹತ್ವದ ಪುಣ್ಯ ಕಾರ್ಯಕ್ಕೆ ತಾವೂ ಸಹ ತನು–ಮನ–ಧನದ ಸಹಾಯ ಸಹಕಾರ ನೀಡುವುದಾಗಿ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಮಾಜಿ ಶಾಸಕರಾದ ಗಂಗಣ್ಣ ಮಹಾಂತಶೆಟ್ಟರ, ಆನಂದ ಮೆಕ್ಕಿ, ಕುಬೇರಪ್ಪ ಮಹಾಂತಶೆಟ್ಟರ, ಹಿರೇಮಠ, ಜಯಣ್ಣ ಹಿರೇಮಠ, ಪ್ರವೀಣ ಬೋಮಲೆ ಸೇರಿದಂತೆ ಹಲವಾರು ಪ್ರಮುಖರು ಉಪಸ್ಥಿತರಿದ್ದರು.

### ಹರಪನಹಳ್ಳಿಯಿಂದ ಗುಜರಾತ್‌ಗೆ ಪಡಿತರ ಅಕ್ಕಿ ಅಕ್ರಮ ಸಾಗಾಟಕ್ಕೆ ಯತ್ನಿಸಿದ ಲಾರಿ ಸಮೇತ ಅಕ್ಕಿ ಜಪ್ತಿ– ನಕಲಿ ದಾಖಲೆ ಸೃಷ್ಟಿಸಿದ್ದ ಜಾಲ ಬಯಲು

# ಅನ್ನಭಾಗ್ಯ ಅಕ್ಕಿಗೆ ಕಳ್ಳರ ಕನ್ನ..!

■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ 'ಅನ್ನಭಾಗ್ಯ' ಯೋಜನೆಯಡಿ ಬಡವರ ಹೊಟ್ಟೆ ಸೇರುವ ಪಡಿತರ ಅಕ್ಕಿಯನ್ನೇ ಗುರಿಯಾಗಿಸಿಕೊಂಡ ಅಕ್ರಮ ಜಾಲವನ್ನು ಗದಗ ಪೊಲೀಸರು ಭೇದಿಸಿದ್ದಾರೆ. ಪಡಿತರ ಅಕ್ಕಿಯನ್ನು ಪಾಲಿಶ್ ಮಾಡಿ, ನಕಲಿ ದಾಖಲೆ ಸೃಷ್ಟಿಸಿ ಗುಜರಾತ್‌ಗೆ ಸಾಗಿಸುತ್ತಿದ್ದ ಭಾರೀ ದಂಧೆಯನ್ನು ಬೆಟಗೇರಿ ಬಡಾವಣೆ ಪೊಲೀಸರು ಪತ್ತೆ ಹಚ್ಚಿದ್ದು, ಕಾರ್ಯಾಚರಣೆಯಲ್ಲಿ 42.88 ಲಕ್ಷ ಮೌಲ್ಯದ ಅಕ್ಕಿ ಹಾಗೂ ಲಾರಿಯನ್ನು ಜಪ್ತಿ ಮಾಡಿದ್ದಾರೆ.

ಗುರುವಾರ ಎಪಿಎಂಸಿ ಆವರಣದಲ್ಲಿರುವ ಆಹಾರ ನಿಗಮದ ಗೋದಾಮಿಗೆ ಭೇಟಿ ನೀಡಿದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್ ಜಪ್ತಿ ಮಾಡಿದ ಅಕ್ಕಿಯನ್ನು ಪರಿಶೀಲಿಸಿ ಸುದ್ದಿಗಾರರಿಗೆ ಮಾಹಿತಿ ನೀಡಿದರು.

ಬುಧವಾರ ಸಂಜೆ ಗದಗ ನಗರದ ಮುಂಡರಗಿ ರಸ್ತೆಯ ತೋಂಟದಾರ್ಯ ಎಂಜಿನಿಯರಿಂಗ್ ಕಾಲೇಜ್ ಎದುರು ಅಕ್ಕಿ ತುಂಬಿದ ಲಾರಿಯೊಂದು ಅನುಮಾನಾಸ್ಪದವಾಗಿ ನಿಂತಿರುವ ಬಗ್ಗೆ ಪೊಲೀಸರಿಗೆ



ಖಚಿತ ಮಾಹಿತಿ ಲಭಿಸಿತ್ತು. ತಕ್ಷಣ ಕಾರ್ಯಾಚರಣೆ ನಡೆಸಿದ ಬೆಟಗೇರಿ ಬಡಾವಣೆ ಪೊಲೀಸರು ಲಾರಿಯನ್ನು ತಡೆದು ತಪಾಸಣೆ ನಡೆಸಿದಾಗ, ಬಳ್ಳಾರಿ ಜಿಲ್ಲೆಯ ಹರಪನಹಳ್ಳಿಯಿಂದ ಗುಜರಾತ್ ರಾಜ್ಯಕ್ಕೆ ಪಡಿತರ ಅಕ್ಕಿ ಅಕ್ರಮವಾಗಿ ಸಾಗಿಸಲಾಗುತ್ತಿರುವುದು ಬೆಳಕಿಗೆ ಬಂದಿದೆ.

ಸರ್ಕಾರದ ಪಡಿತರ ಅಕ್ಕಿಯನ್ನು ಮೇಲ್ನೋಟಕ್ಕೆ ಗುರುತಿಸಲಾಗದಂತೆ ಫ್ಯಾಕ್ಟರಿಯಲ್ಲಿ ಪಾಲಿಶ್ ಮಾಡಲಾಗಿತ್ತು. ಅಲ್ಲದೆ, ಇದು ಪಡಿತರ ಅಕ್ಕಿಯಲ್ಲ ಎಂಬಂತೆ ತೋರಿಸಲು ನಕಲಿ ವೇಬಿಲ್ ಹಾಗೂ ಇತರೆ ದಾಖಲೆಗಳನ್ನು ಸೃಷ್ಟಿಸಲಾಗಿತ್ತು.

ಆದರೆ ಆಹಾರ ಇಲಾಖೆ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ ಬಳಿಕ ಅದು ಸರ್ಕಾರದ ಪಡಿತರ ಅಕ್ಕಿಯೇ ಎಂಬುದು ಖಚಿತವಾಗಿದೆ. ನಂತರ ಆರೋಪಿಗಳನ್ನು ವಶಕ್ಕೆ ಪಡೆದು ಪೊಲೀಸರು ತನಿಖೆ ಚುರುಕುಗೊಳಿಸಿದ್ದಾರೆ.

ಪ್ರಕರಣಕ್ಕೆ ಸಂಬಂಧಿಸಿದಂತೆ ಮಧ್ಯಪ್ರದೇಶ ಮೂಲದ ಲಾರಿ ಚಾಲಕನನ್ನು ವಶಕ್ಕೆ ಪಡೆಯಲಾಗಿದೆ. ಲಾರಿಯನ್ನು ಬಾಡಿಗೆಗೆ ಪಡೆದು ಸಾಗಾಟಕ್ಕೆ ಬಳಸಲಾಗಿತ್ತು ಎಂಬುದು ಪ್ರಾಥಮಿಕ ತನಿಖೆಯಿಂದ ತಿಳಿದು ಬಂದಿದೆ. ಅಕ್ಕಿಯನ್ನು ಪಾಲಿಶ್ ಮಾಡಿದ ಫ್ಯಾಕ್ಟರಿ ಮಾಲೀಕರು, ನಕಲಿ ದಾಖಲೆ ಸೃಷ್ಟಿಸಿದ ಕಿಂಗ್‌ಪಿನ್‌ಗಳು ಹಾಗೂ ಅಕ್ರಮ ಜಾಲದ ಹಿಂದಿರುವ ಪ್ರಮುಖ ಆರೋಪಿಗಳ ಪತ್ತೆಗೆ ವಿಶೇಷ ತಂಡ ರಚಿಸಲಾಗಿದೆ ಎಂದು ಎಸ್ಪಿ ರೋಹನ್ ಜಗದೀಶ್ ತಿಳಿಸಿದ್ದಾರೆ.

ಕಾರ್ಯಾಚರಣೆಯ ವೇಳೆ ಡಿವೈಎಸ್ಪಿ ಮುರ್ತುಜಾ ಖಾದ್ರಿ, ಆಹಾರ ನಿರೀಕ್ಷಕ ಜಗದೀಶ ಅಮಾತಿ ಸೇರಿದಂತೆ ಆಹಾರ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

> "ಪಡಿತರ ಅಕ್ಕಿಯನ್ನು ಪಾಲಿಶ್ ಮಾಡಿ, ನಕಲಿ ದಾಖಲೆ ಸೃಷ್ಟಿಸಿ ಗುಜರಾತ್‌ಗೆ ಸಾಗಿಸಲಾಗುತ್ತಿತ್ತು. ಈ ಜಾಲದ ಹಿಂದಿರುವ ಪ್ರಮುಖ ಆರೋಪಿಗಳ ಪತ್ತೆಗೆ ವಿಶೇಷ ತಂಡ ರಚಿಸಲಾಗಿದೆ. ಸಮಗ್ರ ತನಿಖೆ ನಡೆಸಿ ಕಠಿಣ ಕ್ರಮ ಕೈಗೊಳ್ಳಲಾಗುವುದು"
> **– ರೋಹನ್ ಜಗದೀಶ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ**

### ಲಕ್ಕುಂಡಿಯ ದುರ್ಗಾದೇವಿ ಕೆರೆಯಲ್ಲಿ ॥ ನೃತ್ಯ, ಸಂಗೀತ ಕಲೆಯ ಸೊಬಗು ಸಾರುವ ಶಿಲ್ಪಗಳು ಗಮನ ಸೆಳೆಯುತ್ತಿವೆ

# ಹೊಯ್ಸಳ ಕಾಲದ ಅಪರೂಪದ ಶಿಲ್ಪಾವಶೇಷ ಪತ್ತೆ

■ವಿಜಯಸಾಕ್ಷಿ ಸುದ್ದಿ, ಗದಗ

ಐತಿಹಾಸಿಕ ಲಕ್ಕುಂಡಿ ಗ್ರಾಮದಲ್ಲಿ ನಡೆಯುತ್ತಿರುವ ಪ್ರಾಚ್ಯಾವಶೇಷ ಅನ್ವೇಷಣೆಯ ವೇಳೆ ದುರ್ಗಾದೇವಿ ಕೆರೆಯಲ್ಲಿ ಹೊಯ್ಸಳ ಕಾಲಕ್ಕೆ ಸೇರಿದ ಅಪರೂಪದ ಶಿಲ್ಪಾವಶೇಷಗಳು ಪತ್ತೆಯಾಗಿವೆ. ಈ ಕುರಿತು ಜಿಲ್ಲಾ ಪಂಚಾಯತ್ ಮಾಜಿ ಅಧ್ಯಕ್ಷ ಹಾಗೂ ಲಕ್ಕುಂಡಿ ಪ್ರಾಧಿಕಾರದ ಅಧ್ಯಕ್ಷರೂ ಆಗಿರುವ ಸಿದ್ಧಲಿಂಗೇಶ್ವರ ಪಾಟೀಲ್ ಮಾಹಿತಿ ನೀಡಿದ್ದಾರೆ. ಈ ಪ್ರಾಚ್ಯಾವಶೇಷಗಳು ಇತಿಹಾಸಾಸಕ್ತರು ಹಾಗೂ ಪುರಾತತ್ವ ಪ್ರಿಯರ ಗಮನ ಸೆಳೆಯುತ್ತಿವೆ.

ಪತ್ತೆಯಾದ ಎರಡು ಪ್ರಾಚ್ಯಾವಶೇಷಗಳು ಸುಂದರ ಕಲಾತ್ಮಕತೆಯಿಂದ ಕೂಡಿದ ದೇವಾಲಯದ ಬಿಡಿ ಭಾಗಗಳಾಗಿವೆ. ಎರಡೂ ಶಿಲ್ಪಗಳಲ್ಲಿ ಸಂಗೀತ ಮತ್ತು ನೃತ್ಯ ಕಲೆಯ ಅದ್ಭುತ ಅಭಿವ್ಯಕ್ತಿ ಕಾಣಸಿಗುತ್ತಿದ್ದು, ಹೊಯ್ಸಳ ಶೈಲಿಯ ಪ್ರಭಾವ ಸ್ಪಷ್ಟವಾಗಿ ಗೋಚರಿಸುತ್ತಿದೆ.

ಒಂದು ಶಿಲ್ಪದಲ್ಲಿ ಪುರುಷನು ಮದ್ದಳೆ ಬಾರಿಸುತ್ತಿರುವ ದೃಶ್ಯವಿದ್ದು, ಅಲಂಕೃತಳಾದ ಸ್ತ್ರೀ ತ್ರಿಭಂಗಿ ಭಂಗಿಯಲ್ಲಿ



ನೃತ್ಯ ನಿರತಳಾಗಿರುವ ಶಿಲ್ಪ ಮನಸೆಳೆಯುತ್ತದೆ. ಮತ್ತೊಂದು ಭಾಗದಲ್ಲಿ ಪುರುಷನು ವೇಣುವಾದನದಲ್ಲಿ ತಲ್ಲೀನನಾಗಿದ್ದು, ಮಹಿಳೆಯು ನೃತ್ಯದಲ್ಲಿ ತೊಡಗಿರುವ ದೃಶ್ಯ ಕೆತ್ತಲಾಗಿದೆ. ಈ ಶಿಲ್ಪಗಳು ನೃತ್ಯ ಮತ್ತು ಸಂಗೀತ ಎರಡರಲ್ಲೂ ಮಹಿಳೆಯರ ಪ್ರಾವೀಣ್ಯತೆಯನ್ನು ಪ್ರತಿಬಿಂಬಿಸುತ್ತವೆ.

ಶಿಲ್ಪಗಳಲ್ಲಿ ಪುರುಷರ ಮೇಲ್ವಸ್ತ್ರ, ಸ್ತ್ರೀಯರ ಉಡುಪು, ಆಭರಣಗಳು ಹಾಗೂ ವಿಶಿಷ್ಟ ಕೇಶವಿನ್ಯಾಸವನ್ನು ಅತ್ಯಂತ ನಾಜೂಕಾಗಿ ಕೆತ್ತಲಾಗಿದ್ದು, ಶಿಲ್ಪಿಯ ಕಲಾತ್ಮಕತೆ ಎದ್ದು ಕಾಣುತ್ತಿದೆ. ಕೆತ್ತನೆಯ ಸೂಕ್ಷ್ಮತೆ ಮತ್ತು ವಿನ್ಯಾಸಗಳನ್ನು ಗಮನಿಸಿದಾಗ, ಇವು ಯಾವುದೋ ಅತ್ಯುತ್ತಮ ಹೊಯ್ಸಳ ಶೈಲಿಯ ದೇವಾಲಯದ ಭಾಗಗಳಾಗಿರಬಹುದೆಂದು ಅಂದಾಜಿಸಲಾಗಿದೆ.

ಐತಿಹಾಸಿಕ ವೈಭವಕ್ಕೆ ಹೆಸರಾಗಿರುವ ಲಕ್ಕುಂಡಿ ಪ್ರದೇಶದಲ್ಲಿ ಇಂತಹ ಅಪರೂಪದ ಅವಶೇಷಗಳ ಪತ್ತೆ ಮತ್ತೊಮ್ಮೆ ಆ ಭಾಗದ ಸಾಂಸ್ಕೃತಿಕ ಹಾಗೂ ಶಿಲ್ಪಕಲೆಯ ಶ್ರೀಮಂತಿಕೆಯನ್ನು ಸಾಬೀತುಪಡಿಸಿದೆ.

## ಹಾವೇರಿ, ಶಿವಮೊಗ್ಗದಲ್ಲಿ ಗಾಳಿ ಸಹಿತ ಮಳೆ..! ರೈತರ ಮೊಗದಲ್ಲಿ ಮಂದಹಾಸ

■ವಿಜಯಸಾಕ್ಷಿ ಸುದ್ದಿ, ಶಿವಮೊಗ್ಗ/ಹಾವೇರಿ

ಬಿಸಿಲಿನ ತಾಪಕ್ಕೆ ಕಂಗೆಟ್ಟಿದ್ದ ಶಿವಮೊಗ್ಗ ಹಾಗೂ ಹಾವೇರಿ ಜಿಲ್ಲೆಗಳ ಜನತೆಗೆ ವರುಣ ದೇವ ಕೊಂಚ ತಂಪಿನ ಅನುಭವ ನೀಡಿದ್ದಾನೆ. ಶಿವಮೊಗ್ಗ ನಗರ ಸೇರಿದಂತೆ ಜಿಲ್ಲೆಯ ವಿವಿಧ ಭಾಗಗಳಲ್ಲಿ ಉತ್ತಮ ಮಳೆಯಾಗಿದ್ದು, ಹಲವೆಡೆ ಮೋಡ ಕವಿದ ವಾತಾವರಣ ನಿರ್ಮಾಣವಾಗಿದೆ. ಇನ್ನೂ ಹಾವೇರಿ ನಗರ ಸೇರಿದಂತೆ ಜಿಲ್ಲೆಯ ಹಲವೆಡೆ ಭಾರೀ ಗಾಳಿ ಸಹಿತ ಮಳೆಯಾಗಿದೆ. ಕಳೆದ ಕೆಲವು ದಿನಗಳಿಂದ 37 ರಿಂದ 38 ಡಿಗ್ರಿ ಸೆಲ್ಸಿಯಸ್‌ವರೆಗೆ ಏರಿಕೆಯಾಗಿದ್ದ ತಾಪಮಾನದಿಂದ ಜನರು ಬೇಸತ್ತಿದ್ದರು. ಇದೀಗ ಸುರಿದ ಮಳೆಯಿಂದ ಜನರು ಕೊಂಚ ನಿಟ್ಟುಸಿರು ಬಿಡುವಂತಾಗಿದೆ.

### ಜಿಲ್ಲಾಧಿಕಾರಿಗಳಿಗೆ ಆಮ್ ಆದ್ಮಿ ಪಕ್ಷ ಮನವಿ; ಗಂಭೀರ ಗಾಯಾಳುಗಳ ಚಿಕಿತ್ಸಾ ವೆಚ್ಚ ಭರಿಸಲು ಒತ್ತಾಯ

# ಜಾತ್ರೆ ಅವಘಡ: ಗಾಯಾಳುಗಳಿಗೆ 1 ಲಕ್ಷ ಪರಿಹಾರಕ್ಕೆ ಆಗ್ರಹ



■ವಿಜಯಸಾಕ್ಷಿ ಸುದ್ದಿ, ಗದಗ

ಗದಗದ ಪ್ರಸಿದ್ಧ ತೊಂಟದಾರ್ಯ ಜಾತ್ರಾ ಉತ್ಸವದಲ್ಲಿ ಸಂಭವಿಸಿದ ಅವಘಡದಲ್ಲಿ ಗಾಯಗೊಂಡವರಿಗೆ ತಕ್ಷಣ ಪರಿಹಾರ ನೀಡಬೇಕು ಎಂದು ಆಗ್ರಹಿಸಿ ಆಮ್ ಆದ್ಮಿ ಪಕ್ಷದ ಗದಗ ಜಿಲ್ಲಾ ಘಟಕ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿತು.

ಆಮ್ ಆದ್ಮಿ ಪಕ್ಷದ ಜಿಲ್ಲಾ ಅಧ್ಯಕ್ಷ ಡಾ. ದಾದಾಪೀರ ಕಲೆಗಾರ ನೇತೃತ್ವದಲ್ಲಿ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಲಾಯಿತು.

ಈ ವೇಳೆ ಮಾತನಾಡಿದ ಡಾ. ದಾದಾಪೀರ ಕಲೆಗಾರ, ಜಾತ್ರೆಯಲ್ಲಿ ಸಂಭವಿಸಿದ ಅವಘಡದಲ್ಲಿ ಗಾಯಗೊಂಡ ಪ್ರತಿಯೊಬ್ಬರಿಗೂ ತೊಂಟದಾರ್ಯ ಮಠದ ಆಡಳಿತ ಮಂಡಳಿ ಹಾಗೂ ಜಾತ್ರಾ ಸಮಿತಿಯಿಂದ ತಲಾ 1 ಲಕ್ಷ ಪರಿಹಾರ ನೀಡಬೇಕು ಎಂದು ಒತ್ತಾಯಿಸಿದರು.

ಅಷ್ಟೇ ಅಲ್ಲದೆ, ಗಂಭೀರ ಸ್ಥಿತಿಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ಇಬ್ಬರು ಗಾಯಾಳುಗಳ ಸಂಪೂರ್ಣ ವೈದ್ಯಕೀಯ ವೆಚ್ಚವನ್ನು ತೊಂಟದಾರ್ಯ ಮಠದ ಆಡಳಿತ ಮಂಡಳಿ ಹಾಗೂ ಜಾತ್ರಾ ಸಮಿತಿ ಭರಿಸುವಂತೆ ಜಿಲ್ಲಾಡಳಿತ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಆಮ್ ಆದ್ಮಿ ಪಕ್ಷದ ಅಲ್ಪಸಂಖ್ಯಾತ ಘಟಕದ ಜಿಲ್ಲಾ ಅಧ್ಯಕ್ಷ ಜಾಕಿರ್ ನಾಗನೂರ, ಮಲ್ಲಿಕಾರ್ಜುನ ಹಿರೇಮಠ, ಮಹಿಳಾ ಘಟಕದ ಪ್ರಮುಖರಾದ ಪ್ರೇಮಾ ಬಳ್ಳಾರಿ, ಅಶ್ರಫ್ ಅಣ್ಣಿಗೇರಿ, ರೇಖಾ ಹುಲ್ಲೂರು, ಕಿಶೋರ್ ಶಿಂದೆ, ಸುರೇಶ್ ಜಾದವ್, ನಾಗರಾಜ

> "ಜಾತ್ರೆ ಅವಘಡದಲ್ಲಿ ಗಾಯಗೊಂಡವರ ಸಂಕಷ್ಟಕ್ಕೆ ತಕ್ಷಣ ಸ್ಪಂದಿಸಿ ಪರಿಹಾರ ಹಾಗೂ ಚಿಕಿತ್ಸಾ ನೆರವು ನೀಡುವುದು ಆಡಳಿತ ಮಂಡಳಿಯ ಜವಾಬ್ದಾರಿ."
> **– ಡಾ. ದಾದಾಪೀರ ಕಲೆಗಾರ, ಜಿಲ್ಲಾ ಅಧ್ಯಕ್ಷರು, ಆಮ್ ಆದ್ಮಿ ಪಕ್ಷ, ಗದಗ ಜಿಲ್ಲಾ ಘಟಕ**

### ನರೇಗಲ್ಲದಲ್ಲಿ ಭಾರೀ ಗಾಳಿ-ಮಳೆ; ಅಪಾಯಕಾರಿಯಾದ ಮರ ತೆರವುಗೊಳಿಸಿ ಸುಗಮ ಸಂಚಾರಕ್ಕೆ ಕ್ರಮ

# ಬಿಸಿಲ ಧಗೆಗೆ ತಂಪೆರೆದ ಮಳೆರಾಯ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಕಳೆದ ಹಲವು ದಿನಗಳಿಂದ ಕಾಡುತ್ತಿದ್ದ ತೀವ್ರ ಬೇಸಿಗೆಯ ಬಿಸಿಲಿನ ಧಗೆಗೆ ಗುರುವಾರ ನಸುಕಿನಲ್ಲಿ ಸುರಿದ ಮಳೆರಾಯ ಜನರಿಗೆ ತಂಪಿನ ಅನುಭವ ನೀಡಿತು. ಇದರಿಂದ ನರೇಗಲ್ಲ ಹಾಗೂ ಸುತ್ತಮುತ್ತಲಿನ ಜನರು ಸ್ವಲ್ಪ ಹೊತ್ತು ನಿರಾಳತೆಯನ್ನು ಅನುಭವಿಸಿದರು.

ಮಧ್ಯರಾತ್ರಿ 2 ಗಂಟೆ ಸುಮಾರಿಗೆ ಭಾರೀ ಗುಡುಗು–ಮಿಂಚಿನೊಂದಿಗೆ ಆರಂಭವಾದ ಮಳೆ ಬೆಳಗಿನ 5.30ರವರೆಗೂ ಮುಂದುವರಿಯಿತು. ರಾತ್ರಿ 3.30ರ ವೇಳೆಗೆ ಜೋರಾದ ಮಳೆಯೊಂದಿಗೆ ಬಿರುಗಾಳಿ ಬೀಸತೊಡಗಿತು. ಕೆಲವೆಡೆ ಸಿಡಿಲು ಬಿದ್ದ ಅನುಭವವಾದರೂ, ಯಾವುದೇ ಹಾನಿ ಸಂಭವಿಸಿರುವ ಮಾಹಿತಿ ಲಭ್ಯವಾಗಿಲ್ಲ.

ಬಿರುಗಾಳಿಯ ಹೊಡೆತಕ್ಕೆ ಹಲವೆಡೆ



ಗಿಡಮರಗಳು ನಲುಗಿದಂತೆ ಕಂಡು ಬಂದವು. ಪಟ್ಟಣದ ಪೊಲೀಸ್ ಠಾಣೆ ಸಮೀಪದ ಮರದ ಬುಡ ಸಡಿಲಗೊಂಡು ಯಾವ ಕ್ಷಣದಲ್ಲಾದರೂ ಬೀಳುವ ಸ್ಥಿತಿಗೆ ತಲುಪಿತ್ತು.

ವಿಷಯ ತಿಳಿದ ತಕ್ಷಣ ಪೊಲೀಸರು, ಪಟ್ಟಣ ಪಂಚಾಯತಿ ಸಿಬ್ಬಂದಿ ಹಾಗೂ ಸಾರ್ವಜನಿಕರು ಅರಣ್ಯ ಇಲಾಖೆಯ ಗಮನಕ್ಕೆ ತಂದರು.

ಸ್ಥಳಕ್ಕಾಗಮಿಸಿದ ಅರಣ್ಯ ಇಲಾಖೆ ಸಿಬ್ಬಂದಿ, ಗಜೇಂದ್ರಗಡ–ಗದಗ ಸಂಪರ್ಕಿಸುವ ಮುಖ್ಯ ರಸ್ತೆಯಲ್ಲಿದ್ದ ಅಪಾಯಕಾರಿಯಾದ ಮರವನ್ನು ತಕ್ಷಣ ತೆರವುಗೊಳಿಸುವ ಕಾರ್ಯಾಚರಣೆ ಕೈಗೊಂಡರು. ಕೆಲವೇ ಸಮಯದಲ್ಲಿ ಮರವನ್ನು ತೆರವುಗೊಳಿಸಿ ವಾಹನ ಸಂಚಾರಕ್ಕೆ ಯಾವುದೇ ಅಡಚಣೆ ಆಗದಂತೆ ಕ್ರಮ ಕೈಗೊಂಡರು.

ಇದೇ ವೇಳೆ ಪಟ್ಟಣದ ಚಂದ್ರಮೌಳೇಶ್ವರ ದೇವಸ್ಥಾನದ ಎದುರಿನ ದೊಡ್ಡ ಬೇವಿನ ಮರ ಕೂಡ ಹಿಂಭಾಗದಲ್ಲಿ ಟೊಳ್ಳಾಗಿದ್ದು, ಮುಂದಿನ ದಿನಗಳಲ್ಲಿ ಅಪಾಯಕ್ಕೆ ಕಾರಣವಾಗುವ ಸಾಧ್ಯತೆ ಇದೆ. ಆದ್ದರಿಂದ ಅದನ್ನು ಕೂಡ ತೆರವುಗೊಳಿಸಲು ಇಲಾಖೆಗೆ ಶಿಫಾರಸು ಮಾಡುವುದಾಗಿ ಉಪವಲಯ ಅರಣ್ಯಾಧಿಕಾರಿ ಅನ್ವರ್ ತಿಳಿಸಿದ್ದಾರೆ.

> "ಸಾರ್ವಜನಿಕರ ಸುರಕ್ಷತೆ ದೃಷ್ಟಿಯಿಂದ ಅಪಾಯಕಾರಿಯಾದ ಮರಗಳನ್ನು ಗುರುತಿಸಿ ತಕ್ಷಣ ಕ್ರಮ ಕೈಗೊಳ್ಳಲಾಗುತ್ತಿದೆ."
> **– ಅನ್ವರ್, ಉಪವಲಯ ಅರಣ್ಯಾಧಿಕಾರಿ**

**ಹಾಲೇವಾಡಿಮಠದ ರಜತ ಮಹೋತ್ಸವ ಹಾಗೂ ಧರ್ಮ ಜಾಗೃತಿ ಸಮಾರಂಭದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳ ಆಶೀರ್ವಚನ**

# ಆಧ್ಯಾತ್ಮ ಸಂಪತ್ತಿನಿಂದ ಜೀವನದಲ್ಲಿ ಸುಖ-ಶಾಂತಿ ಪ್ರಾಪ್ತಿ



■ **ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಸಿರಿತನ ಬಂದಾಗ ಹಿಗ್ಗದೇ, ಬಡತನ ಬಂದಾಗ ಕುಗ್ಗದೇ ಕ್ರಿಯಾಶೀಲನಾಗಿ ಬದುಕುವುದೇ ಜೀವನದ ಗುರಿಯಾಗಬೇಕು. ಹೊರಗಿನ ಶ್ರೀಮಂತಿಕೆಯ ಜೊತೆಗೆ ಒಳಗಿರುವ ಆಧ್ಯಾತ್ಮ ಸಂಪತ್ತನ್ನು ಬೆಳೆಸಿಕೊಳ್ಳಬೇಕು. ಆಧ್ಯಾತ್ಮ ಸಂಪತ್ತಿನಿಂದ ಜೀವನದಲ್ಲಿ ಸುಖ-ಶಾಂತಿ ಪ್ರಾಪ್ತಿಯಾಗುತ್ತದೆ ಎಂದು ಬಾಳೆಹೊನ್ನೂರಿನ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಗುರುವಾರ ಹಾಲೇವಾಡಿಮಠದ ಶ್ರೀ ಜಗದ್ಗುರು ರೇಣುಕಾಚಾರ್ಯ ಮಂದಿರದ ರಜತ ಮಹೋತ್ಸವ, ಜಯಂತ್ಯುತ್ಸವ ಹಾಗೂ ಮಾತಾ-ಪಿತೃಗಳ ಪುಣ್ಯಸ್ಮರಣೆ ಅಂಗವಾಗಿ ನಡೆದ ಧರ್ಮ ಜಾಗೃತಿ ಸಮಾರಂಭದಲ್ಲಿ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದರು.

ಸತ್ಯ ಮತ್ತು ಶುದ್ಧ ಜೀವನಕ್ಕೆ ಆದರ್ಶ ಮೌಲ್ಯಗಳ ಪರಿಪಾಲನೆ ಅಗತ್ಯವಾಗಿದೆ. ಧರ್ಮದ ವೃಕ್ಷ ಕೇವಲ ವೃಕ್ಷವಲ್ಲ, ಅದು ಸಮೃದ್ಧಿ ಮತ್ತು ಶಾಂತಿಯ ತಂಗಾಳಿ ನೀಡುವ ಅಶ್ವತ್ಥ ವೃಕ್ಷವಾಗಿದೆ ಎಂದರು.

ಆಚಾರ್ಯರು, ಋಷಿ-ಮುನಿಗಳು, ಸಾಧು-ಸಂತರು ಜ್ಞಾನ ಸುಧೆ ಹಂಚುವ ಮೂಲಕ ಇತರರ ಬದುಕನ್ನು ಬೆಳಗಿಸುತ್ತಾರೆ. ಶ್ರೀ ಜಗದ್ಗುರು ರೇಣುಕಾಚಾರ್ಯರು ಜಾತಿ, ಮತ, ಪಂಥಗಳೆನ್ನದೆ ಸಕಲರ ಏಳಿಗೆಗಾಗಿ ಶ್ರಮಿಸಿದ್ದು, ಅವರು ತೋರಿದ ದಾರಿ ನಮ್ಮ ಬದುಕಿಗೆ ಬೆಳಕು ತೋರಿಸಿದೆ ಎಂದು ಹೇಳಿದರು.

ಹಾಲೇವಾಡಿಮಠ ಸಹೋದರರು ಸುಂದರ ಮಂದಿರ ನಿರ್ಮಿಸಿ 25 ವರ್ಷ ಪೂರೈಸಿದ ಸಂದರ್ಭದಲ್ಲಿ ರಜತ ಮಹೋತ್ಸವ ಆಚರಿಸುತ್ತಿರುವುದು ಸಂತಸ ತಂದಿದೆ ಎಂದರು.

ಕಾರ್ಯಕ್ರಮ ಉದ್ಘಾಟಿಸಿದ ಆನಂದ ಮೆಕ್ಕಿ ಮಾತನಾಡಿ, ಭೌತಿಕ ಬದುಕಿಗೆ ಸಂಪತ್ತು ಮಾತ್ರ ಮುಖ್ಯವಲ್ಲ. ಅದರೊಂದಿಗೆ ಧರ್ಮ, ಶ್ರದ್ಧೆ ಮತ್ತು ಸದಾಚಾರವೂ ಬೆಳೆಯಬೇಕು. ಈ ದಿಸೆಯಲ್ಲಿ ಹಾಲೇವಾಡಿಮಠ ಸಹೋದರರ ಕಾರ್ಯ ಶ್ಲಾಘನೀಯವಾಗಿದೆ ಎಂದು ಹೇಳಿದರು.

ಭಾವಚಿತ್ರ ಬಿಡುಗಡೆ ಮಾಡಿದ ಚಂಬಣ್ಣ ಬಾಳಿಕಾಯಿ ಮಾತನಾಡಿ, ಹಾಲೇವಾಡಿಮಠ ಬಂಧುಗಳು ಕೈಗೊಂಡಿರುವ ಧಾರ್ಮಿಕ ಕಾರ್ಯಗಳು ಇತರರಿಗೆ ಸ್ಫೂರ್ತಿದಾಯಕವಾಗಿವೆ ಎಂದರು.

ಗದಗ ಸರ್ಕಾರಿ ಮಹಿಳಾ ಕಾಲೇಜಿನ ಡಾ. ಸಿದ್ಧಲಿಂಗೇಶ ಸಜ್ಜನಶೆಟ್ರ ಉಪನ್ಯಾಸ ನೀಡಿದರು. ವೀರೇಶ ಕೂಗು, ವಿಜಯ ಮಹಾಂತಶೆಟ್ಟರ, ಕುಬೇರಪ್ಪ ಮಹಾಂತಶೆಟ್ಟರ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದರು.

ಕಾರ್ಯಕ್ರಮದ ನೇತೃತ್ವ ವಹಿಸಿದ್ದ ಮುಕ್ತಿಮಂದಿರ ಕ್ಷೇತ್ರದ ವಿಮಲ ರೇಣುಕ ಮುಕ್ತಿಮುನಿ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ದುಡಿಮೆಯ ಬದುಕಿನಿಂದ ಉತ್ಕರ್ಷ ಸಾಧ್ಯ. ನಡೆಯುವ ಕಾಲು, ದುಡಿಯುವ ಕೈಗಳಿದ್ದರೆ ಬದುಕಿನಲ್ಲಿ ಏನನ್ನಾದರೂ ಸಾಧಿಸಬಹುದು ಎಂದು ಹೇಳಿದರು.

ಮೈಸೂರು-ಬನ್ನಿಕೊಪ್ಪದ ಡಾ. ಮುಮ್ಮಡಿ ಚಂದ್ರಶೇಖರ ಶಿವಾಚಾರ್ಯರು, ಗಂಜೀಗಟ್ಟಿ ಡಾ. ವೈಜನಾಥ ಶಿವಾಚಾರ್ಯರು, ಸಿದ್ಧರಬೆಟ್ಟ ಕ್ಷೇತ್ರದ ವೀರಭದ್ರ ಶಿವಾಚಾರ್ಯರು, ಕರೇವಾಡಿಮಠ ಮಳೆಮಲ್ಲಿಕಾರ್ಜುನ ಶಿವಾಚಾರ್ಯರು ಪಾಲ್ಗೊಂಡು ಉಪದೇಶಾಮೃತ ನೀಡಿದರು.

ಶಿವಲಿಂಗಯ್ಯ ಹಾಲೇವಾಡಿಮಠ ಕಾರ್ಯಕ್ರಮ ಸಂಯೋಜಿಸಿದರು. ಡಾ. ಎಸ್.ಜಿ. ಹಾಲೇವಾಡಿಮಠ ಸ್ವಾಗತಿಸಿದರು. ಡಾ. ಪ್ರಭುಸ್ವಾಮಿ ಜಿ. ಹಾಲೇವಾಡಿಮಠ ಪ್ರಾಸ್ತಾವಿಕವಾಗಿ ಮಾತನಾಡಿದರು.

ಶ್ರೀ ಜಗದ್ಗುರು ರೇಣುಕಾಚಾರ್ಯ ಗುರುಕುಲ ಸಾಧಕರಿಂದ ವೇದಘೋಷ ನಡೆಯಿತು. ಪಾರ್ವತಿ ಕಳ್ಳಿಮಠ ಪ್ರಾರ್ಥನೆ ಸಲ್ಲಿಸಿದರು. ಹೊನ್ನತ್ತಿಯ ಬಸವರಾಜ ಹಿರೇಮಠ ಭಕ್ತಿಗೀತೆ ಹಾಡಿದರು. ಸವಣೂರಿನ ಡಾ. ಗುರುಪಾದಯ್ಯ ಸಾಲಿಮಠ ಕಾರ್ಯಕ್ರಮ ನಿರೂಪಿಸಿದರು.

ಇದೇ ಸಂದರ್ಭದಲ್ಲಿ ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಹಾಲೇವಾಡಿಮಠಕ್ಕೆ ಭೇಟಿ ನೀಡಿ ಆಶೀರ್ವಾದ ಪಡೆದರು.

> "ಹೊರಗಿನ ಶ್ರೀಮಂತಿಕೆಯ ಜೊತೆಗೆ ಒಳಗಿರುವ ಆಧ್ಯಾತ್ಮ ಸಂಪತ್ತನ್ನು ಬೆಳೆಸಿಕೊಳ್ಳಬೇಕು. ಆಧ್ಯಾತ್ಮ ಸಂಪತ್ತಿನಿಂದ ಜೀವನದಲ್ಲಿ ಸುಖ-ಶಾಂತಿ ಪ್ರಾಪ್ತಿಯಾಗುತ್ತದೆ"
> –ಡಾ. ವೀರಸೋಮೇಶ್ವರ ಜಗದ್ಗುರು

**ಗದಗದ ನುಡಿಸಿರಿ ಸಾಹಿತ್ಯ ಸಮ್ಮೇಳನದಲ್ಲಿ ಪ್ರಶಸ್ತಿ ಪ್ರದಾನ; 65 ಬಾರಿ ರಕ್ತದಾನ ಮಾಡಿದ ಸಮಾಜಸೇವಕನಿಗೆ ಗೌರವ**

# ಜೀವರಕ್ಷಕ ಸೇವೆಗೆ ಡಾ. ವೈಕುಂಠೆಗೆ ರಾಜ್ಯ ಮಟ್ಟದ ಗೌರವ

■ **ವಿಜಯಸಾಕ್ಷಿ ಸುದ್ದಿ, ಗದಗ**

ರಕ್ತದಾನ ಹಾಗೂ ಉಚಿತ ರಕ್ತಗುಂಪು ತಪಾಸಣಾ ಶಿಬಿರಗಳ ಮೂಲಕ ಸಮಾಜಮುಖಿ ಸೇವೆ ಸಲ್ಲಿಸುತ್ತಿರುವ ಬೆಟಗೇರಿಯ ರಕ್ತತಪಾಸಿಗ ಡಾ. ದತ್ತಾತ್ರೇಯ ವೈಕುಂಠೆ ಅವರಿಗೆ 'ಶರಣಶ್ರೀ' ರಾಜ್ಯ ಪ್ರಶಸ್ತಿ ಪ್ರದಾನ ಮಾಡಿ ಗೌರವಿಸಲಾಯಿತು.

ನಗರದ ಲಾಯನ್ಸ್ ಭವನದಲ್ಲಿ ಧಾರವಾಡದ ಚೇತನ ಫೌಂಡೇಶನ್, ಬೆಂಗಳೂರಿನ ಗಂಧದ ಗುಡಿ ಕನ್ನಡ ಸಂಘ, ಕರ್ನಾಟಕ ರಾಜ್ಯ ಲೇಖಕಿಯರ ಸಂಘ ಗದಗ ಜಿಲ್ಲಾ ಘಟಕ ಹಾಗೂ ಶರಣೆ ಅಕ್ಕಮಹಾದೇವಿ ಕದಳಿಶ್ರೀ ವೇದಿಕೆ ಗದಗ ಜಿಲ್ಲಾ ಘಟಕಗಳ ಸಹಯೋಗದಲ್ಲಿ ಆಯೋಜಿಸಿದ್ದ ನುಡಿಸಿರಿ ಸಾಹಿತ್ಯ ಸಮ್ಮೇಳನದಲ್ಲಿ ಪ್ರಶಸ್ತಿ ಪ್ರದಾನ ನಡೆಯಿತು.



ಕಳೆದ 30 ವರ್ಷಗಳಿಂದ ಗದಗ-ಬೆಟಗೇರಿ ಅವಳಿ ನಗರ ಸೇರಿದಂತೆ ಗದಗ ಜಿಲ್ಲೆ ಹಾಗೂ ನೆರೆಯ ಜಿಲ್ಲೆಗಳಲ್ಲಿ ಉಚಿತ ರಕ್ತಗುಂಪು ತಪಾಸಣಾ ಶಿಬಿರಗಳನ್ನು ನಿರಂತರವಾಗಿ ನಡೆಸಿಕೊಂಡು ಬರುತ್ತಿರುವ ಡಾ. ದತ್ತಾತ್ರೇಯ ವೈಕುಂಠೆ, ಸಾರ್ವಜನಿಕರಲ್ಲಿ ರಕ್ತದಾನದ ಮಹತ್ವದ ಕುರಿತು ಜಾಗೃತಿ ಮೂಡಿಸುವ ಕಾರ್ಯದಲ್ಲೂ ತೊಡಗಿಸಿಕೊಂಡಿದ್ದಾರೆ.

> "ರಕ್ತದಾನ ಎಂಬುದು ಜೀವ ಉಳಿಸುವ ಮಹಾದಾನ. ಸಮಾಜದಲ್ಲಿ ಇನ್ನಷ್ಟು ಜನರು ಸ್ವಯಂಪ್ರೇರಿತವಾಗಿ ರಕ್ತದಾನ ಮಾಡಲು ಮುಂದಾಗಬೇಕು."
> – ಡಾ. ದತ್ತಾತ್ರೇಯ ವೈಕುಂಠೆ, ಪ್ರಶಸ್ತಿ ಪುರಸ್ಕೃತರು

ಇದುವರೆಗೆ 65 ಬಾರಿ ರಕ್ತದಾನ ಮಾಡಿರುವ ಅವರ ಸಾಮಾಜಿಕ ಸೇವೆಯನ್ನು ಗುರುತಿಸಿ ಗದಗ ಜಿಲ್ಲಾಡಳಿತ ಸೇರಿದಂತೆ ಹಲವು ಸಂಘ-ಸಂಸ್ಥೆಗಳು, ಮಠ-ಮಂದಿರಗಳು ವಿವಿಧ ಪ್ರಶಸ್ತಿಗಳ ಮೂಲಕ ಗೌರವಿಸಿವೆ.

ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಕನ್ನಡ ಸಾಹಿತ್ಯ ಪರಿಷತ್ತಿನ ಗದಗ ಜಿಲ್ಲಾ ಘಟಕದ ನಿಕಟಪೂರ್ವ ಅಧ್ಯಕ್ಷ ಡಾ. ಶಿವಪ್ಪ ಕುರಿ, ಸಮ್ಮೇಳನದ ಸರ್ವಾಧ್ಯಕ್ಷೆ ಸಾಹಿತಿ ರತ್ನಾ ಬಡಿ, ಧಾರವಾಡದ ಚೇತನ ಫೌಂಡೇಶನ್ ಅಧ್ಯಕ್ಷ ಚಂದ್ರಶೇಖರ ಮಾಡಲಗೇರಿ, ಡಾ. ಪ್ರೇಮಾ ಶೆಟ್ಟಿ, ಸಾಹಿತಿ ಜಿ.ಎಸ್. ಪಾಟೀಲ, ಚಂಪಾ ಚಂದ್ರಶೇಖರ ಪಾಟೀಲ, ಶಿವಶಾಂತಾ ಬಿಸನಳ್ಳಿ, ಸಂಧ್ಯಾ ಕೋಟಿ, ಸುಶೀಲಾ ಕೋಟಿ, ರವಿ ನಾಟೇಕರ, ಬಿ. ರಂಗಸ್ವಾಮಿ, ಶಿವಲಿಂಗಪ್ಪ ಅಣ್ಣಿಗೇರಿ, ಎಲ್.ಬಿ. ಲಕ್ಕಮ್ಮನವರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

**ಯುವಜನರಲ್ಲಿ ನೈತಿಕ ಮೌಲ್ಯ ಬೆಳೆಸುವ ಉದ್ದೇಶ: ಮಲ್ಲನಗೌಡ ಪಾಯಪ್ಪಗೌಡ್ರ**

# "ಧರ್ಮದ ನುಡಿ ಬೆಂಕಿಯ ಕಿಡಿ" ನಾಟಕದ ಪೋಸ್ಟರ್ ಬಿಡುಗಡೆ



■ **ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಪೌರಾಣಿಕ ನಾಟಕಗಳು ಸಮಾಜದಲ್ಲಿ ನೈತಿಕ ಮೌಲ್ಯಗಳನ್ನು ಬೆಳೆಸುವಲ್ಲಿ ಮಹತ್ವದ ಪಾತ್ರ ವಹಿಸುತ್ತವೆ ಎಂದು ನಿವೃತ್ತ ಶಿಕ್ಷಕ ಹಾಗೂ ನಾಟಕದ ಉಸ್ತುವಾರಿ ಮಲ್ಲನಗೌಡ ಪಾಯಪ್ಪಗೌಡ್ರ ಹೇಳಿದರು.

ಪಟ್ಟಣದ ಶ್ರೀ ಕಟ್ಟಿಬಸವೇಶ್ವರ ಸಂಘದ ವತಿಯಿಂದ ಮೇ 11ರಂದು ಪ್ರದರ್ಶನಗೊಳ್ಳಲಿರುವ "ಧರ್ಮದ ನುಡಿ ಬೆಂಕಿಯ ಕಿಡಿ" ನಾಟಕದ ಪೋಸ್ಟರ್ ಬಿಡುಗಡೆ ಕಾರ್ಯಕ್ರಮದ ಬಳಿಕ ನಡೆದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿದರು.

ಇತ್ತೀಚಿನ ದಿನಗಳಲ್ಲಿ ದುಶ್ಚಟಗಳಿಗೆ ಬಲಿಯಾಗಿ ಜೀವನ ಹಾಳು ಮಾಡಿಕೊಳ್ಳುತ್ತಿರುವ ಯುವಜನರನ್ನು ಸರಿಯಾದ ಮಾರ್ಗದತ್ತ ಕೊಂಡೊಯ್ಯುವ ಉದ್ದೇಶದಿಂದ ಈ ನಾಟಕವನ್ನು ಉರುಸಿನ ಅಂಗವಾಗಿ ಆಯೋಜಿಸಲಾಗಿದೆ ಎಂದು ಹೇಳಿದರು.

> "ಪೌರಾಣಿಕ ನಾಟಕಗಳು ಯುವಜನರಲ್ಲಿ ನೈತಿಕತೆ ಹಾಗೂ ಸನ್ಮಾರ್ಗದ ಅರಿವು ಮೂಡಿಸುವ ಶಕ್ತಿ ಹೊಂದಿವೆ."
> – ಮಲ್ಲನಗೌಡ ಪಾಯಪ್ಪಗೌಡ್ರ, ನಾಟಕದ ಉಸ್ತುವಾ

ರಾಮಾಯಣದ ಕಥಾಹಂದರ ಆಧರಿಸಿದ ಈ ನಾಟಕಕ್ಕೆ ಗೋಗೇರಿಯ ನಾಟಕ ಗುರು ಶಂಕರ ರೊಟ್ಟಿಯವರು ಸ್ಥಳೀಯ ಯುವಕರಿಗೆ ತಾಲೀಮು ನೀಡುತ್ತಿದ್ದಾರೆ. ಕಲೆಯನ್ನು ಪ್ರೋತ್ಸಾಹಿಸುವ ಉದ್ದೇಶದಿಂದಲೂ ಈ ನಾಟಕ ಪ್ರದರ್ಶನ ಮಾಡಲಾಗುತ್ತಿದೆ ಎಂದು ತಿಳಿಸಿದರು.

ನ್ಯಾಯವಾದಿ ಉಮೇಶ ಸಂಗನಾಳಮಠ ಮಾತನಾಡಿ, ಹಿಂದೂ-ಮುಸ್ಲಿಂ ಭಾವೈಕ್ಯತೆಯ ಸಂಕೇತವಾಗಿ ಈ ನಾಟಕ ಆಯೋಜಿಸಲಾಗಿದೆ ಎಂದರು.

ನಾಟಕ ಆಯೋಜನೆಗೆ ಓಣಿಯ ನಿವಾಸಿಗಳು ಹಾಗೂ ದಾನಿಗಳು ಸಾಕಷ್ಟು ಸಹಕಾರ ನೀಡಿದ್ದು, ಅವರ ಪ್ರೋತ್ಸಾಹಕ್ಕೆ ಸಂಘದ ವತಿಯಿಂದ ಕೃತಜ್ಞತೆ ಸಲ್ಲಿಸುತ್ತೇವೆ ಎಂದರು.

ಮೇ 11ರ ಸೋಮವಾರ ರಾತ್ರಿ 10 ಗಂಟೆಗೆ ಸಂತೆ ಬಜಾರ್‌ನ ಶ್ರೀ ಗಣಪತಿ ದೇವಸ್ಥಾನದ ಸಭಾಂಗಣದಲ್ಲಿ ನಾಟಕ ಪ್ರದರ್ಶನಗೊಳ್ಳಲಿದ್ದು, ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ವೀಕ್ಷಿಸಿ ಕಲಾವಿದರನ್ನು ಪ್ರೋತ್ಸಾಹಿಸಬೇಕು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಕಲ್ಮೇಶ ತೊಂಡಿಹಾಳ, ಪರಪ್ಪ ಬೆಡಗಲ್ಲ, ಮುತ್ತಣ್ಣ ಮಾವಿನಕಾಯಿ, ಫಕೀರಗೌಡ ಪಾಯಪ್ಪಗೌಡ್ರ, ಶಿವಣ್ಣ ಮುಗಳಿ, ಬಸವರಾಜ ಮಾಳವಾಡ, ಮಂಜುನಾಥ ಮಲ್ಲನಗೌಡ್ರ, ಮಹಾದೇವಪ್ಪ ಬೇವಿನಕಟ್ಟಿ, ಅಶೋಕ ಬಾರಕೇರ, ಉಡಚಪ್ಪ ತಳವಾರ, ವೀರಣ್ಣ ಗುಜಮಾಗಡಿ, ಮುತ್ತಪ್ಪ ಬಿಷ್ಟನಗೌಡ್ರ, ಶ್ರೀಕಾಂತ ಹೊಸಮನಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

**ಕಾಂಗ್ರೆಸ್‌ಗೆ ದೇಶದಲ್ಲಿ ಹಿನ್ನಡೆ : ವಿಜಯೋತ್ಸವ ಹಾಸ್ಯಾಸ್ಪದ ಎಂದ ಗೋವಿಂದಗೌಡ್ರ**

# ವಿಜಯೋತ್ಸವ ಬದಲು ಶೋಕಾಚರಣೆ ಮಾಡಬೇಕಿತ್ತು

■ **ವಿಜಯಸಾಕ್ಷಿ ಸುದ್ದಿ, ಗದಗ**

"ಐದು ರಾಜ್ಯಗಳ ಚುನಾವಣಾ ಫಲಿತಾಂಶವನ್ನು ನೋಡಿದರೆ ಕಾಂಗ್ರೆಸ್ ಪಕ್ಷದ ಸ್ಥಿತಿ ಅಧೋಗತಿಗೆ ತಲುಪಿದೆ. ಇಂತಹ ಸಂದರ್ಭದಲ್ಲಿ ಕಾಂಗ್ರೆಸ್ ಕಾರ್ಯಕರ್ತರು ವಿಜಯೋತ್ಸವ ಆಚರಿಸಿರುವುದು ಹಾಸ್ಯಾಸ್ಪದ" ಎಂದು ಜೆಡಿಎಸ್ ರಾಜ್ಯ ವಕ್ತಾರ ವೆಂಕನಗೌಡ ಆರ್. ಗೋವಿಂದಗೌಡ್ರ ಟೀಕಿಸಿದರು.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಕಾಂಗ್ರೆಸ್ ಪಕ್ಷ ದೇಶಾದ್ಯಂತ ಹಿನ್ನಡೆ ಅನುಭವಿಸುತ್ತಿದ್ದರೂ ವಿಜಯೋತ್ಸವ ಆಚರಿಸುವ ಮೂಲಕ ಅಪಹಾಸ್ಯಕ್ಕೆ ಒಳಗಾಗಿದೆ ಎಂದು ಆರೋಪಿಸಿದರು.

ಪಶ್ಚಿಮ ಬಂಗಾಳದಲ್ಲಿ ಬೆರಳೆಣಿಕೆಯ ಸ್ಥಾನಗಳನ್ನು ಮಾತ್ರ ಗೆದ್ದಿರುವ ಕಾಂಗ್ರೆಸ್, ಅಸ್ಸಾಂ ಮತ್ತು ಪುದುಚೇರಿಯಲ್ಲಿ ಆಡಳಿತ ಕಳೆದುಕೊಂಡಿದೆ. ಕೇರಳದಲ್ಲಿ ಆಡಳಿತ ವಿರೋಧಿ ಅಲೆಯ ಪರಿಣಾಮವಾಗಿ ಮಾತ್ರ ಕಾಂಗ್ರೆಸ್‌ಗೆ ಜನ ಬೆಂಬಲ ಸಿಕ್ಕಿದ್ದು, ಅದು ಪಕ್ಷದ ಮೇಲಿನ ಪ್ರೀತಿಯಿಂದಲ್ಲ ಎಂದು ಹೇಳಿದ್ದಾರೆ.



ಇಂಡಿಯಾ ಮೈತ್ರಿಕೂಟದ ಅಂಗಪಕ್ಷಗಳಾಗಿದ್ದ ಡಿಎಂಕೆ ಮತ್ತು ಕಾಂಗ್ರೆಸ್ ಈಗ ಬೇರೆ ಬೇರೆ ಹಾದಿ ಹಿಡಿದಿರುವುದೇ ಕಾಂಗ್ರೆಸ್ ದುರ್ಬಲ ಸ್ಥಿತಿಯನ್ನು ತೋರಿಸುತ್ತದೆ ಎಂದು ಅಭಿಪ್ರಾಯಪಟ್ಟರು. ತಮಿಳುನಾಡಿನಲ್ಲಿ ರಾಷ್ಟ್ರೀಯ ಪಕ್ಷವೆಂದು ಹೇಳಿಕೊಳ್ಳುವ ಕಾಂಗ್ರೆಸ್ ಕೇವಲ ಐದು ಸ್ಥಾನಗಳನ್ನು ಗೆದ್ದು, ಪ್ರಾದೇಶಿಕ ಪಕ್ಷದ ನಾಯಕ ವಿಜಯ್ ಅವರಿಗೆ ಬೆಂಬಲ ಘೋಷಿಸಿರುವುದು ಕಾಂಗ್ರೆಸ್‌ನ ಸ್ಥಿತಿಗೆ ಸಾಕ್ಷಿಯಾಗಿದೆ ಎಂದು ವೆಂಕನಗೌಡ ಆರ್. ಗೋವಿಂದಗೌಡ್ರ ವ್ಯಂಗ್ಯವಾಡಿದ್ದಾರೆ.

> "ಕಾಂಗ್ರೆಸ್ ಪಕ್ಷದ ಇಂದಿನ ಪರಿಸ್ಥಿತಿ ನೋಡಿದರೆ ವಿಜಯೋತ್ಸವವಲ್ಲ, ಶೋಕಾಚರಣೆ ಮಾಡಬೇಕಾಗಿತ್ತು."
> – ವೆಂಕನಗೌಡ ಆರ್. ಗೋವಿಂದಗೌಡ್ರ, ರಾಜ್ಯ ಜೆಡಿಎಸ್ ವಕ್ತಾರ

# ಜೂ. 6-7 ರಂದು ರಾಜ್ಯ ಮಟ್ಟದ ಯೋಗಾಸನ ಸ್ಪೋರ್ಟ್ಸ್ ಚಾಂಪಿಯನ್‌ಶಿಪ್

■ **ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ರಾಜ್ಯ ಅಮೆಚೂರ್ ಯೋಗ ಸ್ಪೋರ್ಟ್ಸ್ ಅಸೋಸಿಯೇಶನ್ (ರಿ) ಬೆಂಗಳೂರು, ಉತ್ತರ ಕನ್ನಡ ಜಿಲ್ಲಾ ಯೋಗ ಫೆಡರೇಶನ್ (ರಿ) ಶಿರಸಿ ಹಾಗೂ ಯಲ್ಲಾಪುರ ತಾಲೂಕು ಯೋಗಾಸನ ಸ್ಪೋರ್ಟ್ಸ್ ಅಸೋಸಿಯೇಶನ್ (ರಿ) ಇವರ ಸಹಯೋಗದಲ್ಲಿ ರಾಜ್ಯ ಮಟ್ಟದ ಯೋಗಾಸನ ಸ್ಪೋರ್ಟ್ಸ್ ಚಾಂಪಿಯನ್‌ಶಿಪ್-2026 ಅನ್ನು ಜೂನ್ 6 ಮತ್ತು 7 ರಂದು ಆಯೋಜಿಸಲಾಗಿದೆ.

ಉತ್ತರ ಕನ್ನಡ ಜಿಲ್ಲೆಯ ಯಲ್ಲಾಪುರದ ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರೀಯ ವಿಶ್ವವಿದ್ಯಾಲಯದ ತಪೋವನದಲ್ಲಿ ಸ್ಪರ್ಧೆಗಳು ನಡೆಯಲಿವೆ.

ಯೋಗ ಫೆಡರೇಶನ್ ಆಫ್ ಇಂಡಿಯಾ (ರಿ) ಪಂಚಕುಲ (ಹರಿಯಾಣ) ಸಂಸ್ಥೆಯ ಮಾರ್ಗದರ್ಶನ ಹಾಗೂ ನಿಗದಿತ ಪಠ್ಯಕ್ರಮದಂತೆ ಸ್ಪರ್ಧೆಗಳು ನಡೆಯಲಿದ್ದು, 8-10, 10-12, 12-14, 14-16, 16-18, 18-21, 21-5, 25-30, 30-35, 35-45 ಹಾಗೂ 45 ವರ್ಷ ಮೇಲ್ಪಟ್ಟ ವಯೋಮಿತಿಯ ಪುರುಷ ಮತ್ತು ಮಹಿಳೆಯರಿಗೆ ಪ್ರತ್ಯೇಕ ವಿಭಾಗಗಳಲ್ಲಿ ಸ್ಪರ್ಧೆ ಆಯೋಜಿಸಲಾಗಿದೆ.

ಸ್ಪರ್ಧಿಗಳು ಕಡ್ಡಾಯವಾಗಿ ನಿಗದಿಪಡಿಸಿದ 10 ಯೋಗಾಸನಗಳನ್ನು ಪ್ರದರ್ಶಿಸಬೇಕಾಗಿದ್ದು, ಪ್ರತಿ ಆಸನದ ಅಂತಿಮ ಸ್ಥಿತಿಯಲ್ಲಿ 15 ಸೆಕೆಂಡ್ ಕಾಲ ಸ್ಥಿರವಾಗಿರಬೇಕು ಎಂದು ಆಯೋಜಕರು ತಿಳಿಸಿದ್ದಾರೆ. ಸ್ಪರ್ಧೆಯಲ್ಲಿ ವಿಜೇತರಾಗುವವರಿಗೆ ಪದಕ, ಪ್ರಶಸ್ತಿ ಪತ್ರ ನೀಡಲಾಗುವುದು. ಭಾಗವಹಿಸುವ ಎಲ್ಲಾ ಸ್ಪರ್ಧಿಗಳಿಗೆ ಪ್ರಮಾಣಪತ್ರ ವಿತರಿಸಲಾಗುತ್ತದೆ. ಜೊತೆಗೆ 20 ಕ್ಕಿಂತ ಹೆಚ್ಚು ಸ್ಪರ್ಧಿಗಳನ್ನು ಒಳಗೊಂಡ ತಂಡಗಳಿಗೆ ವಿಶೇಷ ಟ್ರೋಫಿ ನೀಡಿ ಪ್ರೋತ್ಸಾಹಿಸಲಾಗುವುದು.

ಆಸಕ್ತ ಸ್ಪರ್ಧಿಗಳು ಆನ್‌ಲೈನ್ ಮೂಲಕ ಹೆಸರು ನೋಂದಾಯಿಸಿಕೊಳ್ಳಬಹುದಾಗಿದ್ದು, ಮೇ 31 ಕೊನೆಯ ದಿನಾಂಕವಾಗಿದೆ.

ಸ್ಪರ್ಧಾ ಆಸನಗಳ ಚಿತ್ರಪಟ ಹಾಗೂ ಹೆಚ್ಚಿನ ಮಾಹಿತಿಗಾಗಿ 9448600581, 9845242465, 9845329306 ಹಾಗೂ 9448317188 ಸಂಖ್ಯೆಗೆ ಸಂಪರ್ಕಿಸಬಹುದು ಎಂದು ಗದಗ ಜಿಲ್ಲಾ ಅಮೆಚೂರ್ ಯೋಗಾಸನ ಸ್ಪೋರ್ಟ್ಸ್ ಅಸೋಸಿಯೇಶನ್ ಅಧ್ಯಕ್ಷ ಕೆ.ಎಸ್. ಪಲ್ಲೇದ ಹಾಗೂ ಕಾರ್ಯದರ್ಶಿ ಚೇತನ ಚುಂಚಾ ತಿಳಿಸಿದ್ದಾರೆ.

**ಕನ್ನಡ ಸಾಹಿತ್ಯ ಪರಿಷತ್ ಸಂಸ್ಥಾಪನಾ ದಿನಾಚರಣೆಯಲ್ಲಿ ಬಿಇಒ ಕಾಂಬೋಗಿ ಕರೆ**

# ಕನ್ನಡ ಸಾಹಿತ್ಯ ಸಂವರ್ಧನೆಗೆ ಎಲ್ಲರೂ ಕೈಜೋಡಿಸಿ



■ **ವಿಜಯಸಾಕ್ಷಿ ಸುದ್ದಿ, ರೋಣ**

ಕನ್ನಡ ಭಾಷೆ ಅತ್ಯಂತ ಸರಳವಾಗಿದ್ದು, ವಿದ್ಯಾರ್ಥಿಗಳು ಅದರಲ್ಲಿ 125ಕ್ಕೆ 125 ಅಂಕಗಳನ್ನು ಪಡೆಯುವುದು ಸಾಧ್ಯವಿದೆ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಎ.ಎನ್. ಕಾಂಬೋಗಿ ಹೇಳಿದರು.

ಪಟ್ಟಣದಲ್ಲಿ ಕನ್ನಡ ಸಾಹಿತ್ಯ ಪರಿಷತ್ ವತಿಯಿಂದ ಆಯೋಜಿಸಿದ್ದ 112ನೇ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಸಾವಿರಾರು ವರ್ಷಗಳ ಇತಿಹಾಸ ಹೊಂದಿರುವ ಕನ್ನಡ ಭಾಷೆಯನ್ನು ರಾಜಮಹಾರಾಜರು ಪೋಷಿಸಿದ್ದು, ಕವಿಗಳು ಅದನ್ನು ಶ್ರೀಮಂತಗೊಳಿಸಿದ್ದಾರೆ ಎಂದು ಹೇಳಿದರು.

ಕನ್ನಡ ಸಾಹಿತ್ಯ ಮತ್ತು ಸಂಸ್ಕೃತಿ ಅತ್ಯಂತ ಸಮೃದ್ಧವಾಗಿದ್ದು, ಅದರ ಸಂವರ್ಧನೆಗೆ ಪ್ರತಿಯೊಬ್ಬರೂ ಕೈಜೋಡಿಸಬೇಕು. "ಕವಿವಾಣಿ ಹೂ, ಜನವಾಣಿ ಬೇರು" ಎಂಬ ಮಾತಿನಂತೆ ಕನ್ನಡ ಬೆಳೆಯಬೇಕು ಎಂದು ಅಭಿಪ್ರಾಯಪಟ್ಟರು.

ನಾಡಿನ ಇತಿಹಾಸದಲ್ಲಿ ಜೈನಧರ್ಮದ ಕೊಡುಗೆ ಅಪಾರವಾಗಿದ್ದು, ಶ್ರವಣಬೆಳಗೊಳದ ಶಾಸನಗಳು ಹಾಗೂ ಶಿಲ್ಪಕಲೆಗಳು ಕನ್ನಡದ ವೈಭವಕ್ಕೆ ಸಾಕ್ಷಿಯಾಗಿವೆ. ಅವುಗಳನ್ನು ಸಂರಕ್ಷಿಸಿ ಮುಂದಿನ ಪೀಳಿಗೆಗೆ ತಲುಪಿಸುವ ಅಗತ್ಯವಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಉಪನ್ಯಾಸಕರಾಗಿ ಭಾಗವಹಿಸಿದ್ದ ಹಿರಿಯ ಸಾಹಿತಿ ವಿ.ಕೆ. ಪಾಟೀಲ ಮಾತನಾಡಿ, ಕನ್ನಡ ಸಾಹಿತ್ಯ ಪರಿಷತ್ತಿನ ನಡೆದು ಬಂದ ದಾರಿಯನ್ನು ವಿವರಿಸಿದರು. ಕನ್ನಡಕ್ಕೆ ಲಭಿಸಿರುವ ಎಂಟು ಜ್ಞಾನಪೀಠ ಪ್ರಶಸ್ತಿಗಳು ಅದರ ಶಕ್ತಿ ಮತ್ತು ಸಾಮರ್ಥ್ಯಕ್ಕೆ ಸಾಕ್ಷಿಯಾಗಿದೆ ಎಂದು ಹೇಳಿದರು.

> "ಕನ್ನಡ ಸಾಹಿತ್ಯ ಮತ್ತು ಸಂಸ್ಕೃತಿಯ ಸಂವರ್ಧನೆಗೆ ಪ್ರತಿಯೊಬ್ಬರೂ ಕೈಜೋಡಿಸುವ ಅಗತ್ಯವಿದೆ."
> – ಎ.ಎನ್. ಕಾಂಬೋಗಿ, ಕ್ಷೇತ್ರ ಶಿಕ್ಷಣಾಧಿಕಾರಿ

ಪ್ರಾಸ್ತಾವಿಕವಾಗಿ ಮಾತನಾಡಿದ ಡಾ. ಶಿವಪ್ರಕಾಶ ಹಿರೇಮಠ, ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಪ್ರಥಮ ಭಾಷೆ ಕನ್ನಡದಲ್ಲಿ 125ಕ್ಕೆ 125 ಅಂಕ ಪಡೆದ ವಿದ್ಯಾರ್ಥಿಗಳನ್ನು ಸನ್ಮಾನಿಸುತ್ತಿರುವುದು ಹೆಮ್ಮೆಯ ಸಂಗತಿ ಎಂದು ಹೇಳಿದರು. ಇಂತಹ ವಿದ್ಯಾರ್ಥಿಗಳು ಭವಿಷ್ಯದಲ್ಲಿ ಕನ್ನಡ ಸೇರಿದಂತೆ ಇತರ ಕ್ಷೇತ್ರಗಳಲ್ಲಿಯೂ ಸಾಧನೆ ಮಾಡಿ ಪೋಷಕರು ಹಾಗೂ ಶಿಕ್ಷಕರಿಗೆ ಕೀರ್ತಿ ತರುತ್ತಾರೆ ಎಂದು ಆಶಿಸಿದರು.

ತಾಲೂಕು ಕಸಾಪ ಅಧ್ಯಕ್ಷ ರಾಮಕಾಂತ ಕಮತಗಿ ಅಧ್ಯಕ್ಷತೆ ವಹಿಸಿ ಮಾತನಾಡಿ, ಕನ್ನಡದ ಬಗ್ಗೆ ಇರುವ ಅಭಿಮಾನವನ್ನು ಮಕ್ಕಳಲ್ಲಿಯೂ ಬೆಳೆಸಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಕನ್ನಡ ವಿಷಯದಲ್ಲಿ ಪೂರ್ಣ ಅಂಕ ಪಡೆದ ತಾಲೂಕಿನ 10 ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರಶಸ್ತಿ ಪತ್ರ ನೀಡಿ ಸನ್ಮಾನಿಸಲಾಯಿತು.

ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಪತ್ರಿಕೋದ್ಯಮದ ಸಂಗಮೇಶ ಮೆಣಸಗಿ, ಭಜನಾ ಗಾಯಕ ಯಲ್ಲಪ್ಪ ಕೆಂಚನಗೌಡ್ರ, ಜನಪದ ಗಾಯಕ ಶಿವಯೋಗಿ ನೀಲಗುಂದ, ಸಾಹಿತಿ ಶಿವಾನಂದ ಹುಣಗುಂಡ ಹಾಗೂ ಭಕ್ತಿ ಗಾಯಕ ವೀರಪ್ಪ ಪಲ್ಲೇದ ಸೇರಿದಂತೆ ಹಲವರನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಪಿ.ಬಿ. ಪಾಟೀಲ, ಎಂ.ಎಸ್. ಪಾಟೀಲ, ಅಬ್ಬಿಗೇರಿ ಪೋಷಕರ ಪ್ರತಿನಿಧಿ ಮಹಾದೇವಿ ತಳವಾರ ಸೇರಿದಂತೆ ಕನ್ನಡ ಸಾಹಿತ್ಯ ಪರಿಷತ್ತಿನ ಪದಾಧಿಕಾರಿಗಳು ಮತ್ತು ಅಭಿಮಾನಿಗಳು ಉಪಸ್ಥಿತರಿದ್ದರು.

# ಲಕ್ಕುಂಡಿ ಪಾರಂಪರಿಕ ಪ್ರದೇಶಕ್ಕೆ ಲೋಗೋ ವಿನ್ಯಾಸ ಸ್ಪರ್ಧೆ

■ **ವಿಜಯಸಾಕ್ಷಿ ಸುದ್ದಿ, ಗದಗ**

ಐತಿಹಾಸಿಕ ಹಾಗೂ ಸಾಂಸ್ಕೃತಿಕ ವೈಭವದಿಂದ ರಾಜ್ಯದ ಪ್ರಮುಖ ಪಾರಂಪರಿಕ ಕೇಂದ್ರವಾಗಿ ಗುರುತಿಸಿಕೊಂಡಿರುವ ಲಕ್ಕುಂಡಿ ಗ್ರಾಮಕ್ಕೆ ವಿಶೇಷ ಲೋಗೋ ವಿನ್ಯಾಸಗೊಳಿಸಲು ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ರಾಜ್ಯ ಮಟ್ಟದಲ್ಲಿ ಕಲಾವಿದರಿಂದ ಅರ್ಜಿ ಆಹ್ವಾನಿಸಿದೆ.

ನವಶಿಲಾಯುಗದಿಂದ ಇತ್ತೀಚಿನ ಕಾಲದವರೆಗೆ ಲಕ್ಕುಂಡಿಯ ಪರಂಪರೆ, ಐತಿಹಾಸಿಕ ಮಹತ್ವ, ಸಾಂಸ್ಕೃತಿಕ ವೈವಿಧ್ಯತೆ ಹಾಗೂ ವೈಶಿಷ್ಟ್ಯಗಳನ್ನು ಪ್ರತಿಬಿಂಬಿಸುವ ಸೃಜನಾತ್ಮಕ ಮತ್ತು ಅರ್ಥಪೂರ್ಣ ಲೋಗೋ ವಿನ್ಯಾಸಗಳನ್ನು ಕಲಾವಿದರು ಸಲ್ಲಿಸಬಹುದಾಗಿದೆ.

ಲೋಗೋ ವಿನ್ಯಾಸಗಳನ್ನು ಎಕಇಲು ಹಾಗೂ PNG ಮಾದರಿಯಲ್ಲಿ ತಯಾರಿಸಿ com. lakkundipradhikara@gmail.com ಇ-ಮೇಲ್ ವಿಳಾಸಕ್ಕೆ ಕಳುಹಿಸಬೇಕು. ಒಬ್ಬ ಕಲಾವಿದ ಗರಿಷ್ಠ ಮೂರು ಲೋಗೋಗಳನ್ನು ಮಾತ್ರ ಸಲ್ಲಿಸಲು ಅವಕಾಶವಿದೆ. ವಿನ್ಯಾಸಗಳನ್ನು ಮೇ 30ರೊಳಗೆ ಸಲ್ಲಿಸಬೇಕು.

ಸ್ವೀಕರಿಸಲಾದ ಲೋಗೋ ವಿನ್ಯಾಸಗಳನ್ನು ಗದಗ ಜಿಲ್ಲಾಧಿಕಾರಿಗಳು ಹಾಗೂ ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರ ನೇತೃತ್ವದ ಸಮಿತಿಯಿಂದ ಪರಿಶೀಲಿಸಿ ಆಯ್ಕೆ ಮಾಡಲಾಗುವುದು. ಆಯ್ಕೆಯಾದ ಲೋಗೋ ವಿನ್ಯಾಸದ ಕಲಾವಿದರಿಗೆ ಪ್ರೋತ್ಸಾಹಕವಾಗಿ ರೂ.25,000 ನಗದು ಬಹುಮಾನ ನೀಡಲಾಗುವುದು.

ಹೆಚ್ಚಿನ ಮಾಹಿತಿಗಾಗಿ ಆಯುಕ್ತರು, ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ, ಕೊಠಡಿ ಸಂಖ್ಯೆ 04, ನೆಲಮಹಡಿ, ಜಿಲ್ಲಾಡಳಿತ ಭವನ, ಹುಬ್ಬಳ್ಳಿ ರಸ್ತೆ, ಗದಗ ಕಚೇರಿಯನ್ನು ಸಂಪರ್ಕಿಸಬಹುದು. ದೂರವಾಣಿ ಸಂಖ್ಯೆ: 9620988939.

ಈ ಕುರಿತು ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಆಯುಕ್ತ ಶರಣು ಗೋಗೇರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬೇಸಿಗೆಯ ಬೇಗೆ




ಬಾನೆಲ್ಲ ಹರಡಿದೆ ಕೆಂಡದ ಮುಸುಕು,
ಧರೆಗಿಳಿದು ಬಂದಿದೆ ರವಿಯ ಸಲಾಕೆ;
ತಂಗಾಳಿ ಮರೆಯಾಗಿ ನಿಂತಿದೆ ಎಲ್ಲೋ,
ಬಿಸಿಯುಸಿರ ಹರಿಸಿದೆ ಪ್ರಕೃತಿ ಯಾಕೆ?

ಗುಬ್ಬಚ್ಚಿ ರೆಕ್ಕೆಗಳ ಬಡಿತದಲಿ ದಣಿವು,
ಬಾಯಾರಿದ ಹಸುಗಳಿಗೆ ನೆರಳಿನ ಸೆಳೆವು;
ಹಸಿರೆಲ್ಲ ಸುಟ್ಟು ಕಂದು ಬಣ್ಣದ ಹೊದಿಕೆ,
ಬಾಡಿದೆ ಹೂಗಳ ಚೆಲುವಿನ ನಲುವು.

ಮಧ್ಯಾಹ್ನ ಮೌನ ತಾಳಿದೆ ಬೀದಿಗಳು,
ಮನೆಯೊಳಗೆ ಆಶ್ರಯ ಬಯಸಿವೆ ಜೀವಿಗಳು;
ಬೆವರಿನ ಹನಿಗಳಲಿ ತೇಲಿದೆ ದಹನ,
ಬಾಳೆಲೆ ಮೇಲೆ ತಣ್ಣನೆಯ ಹನಿಗಳ ಗಾನ.



ವರುಣನ ಕೃಪೆಗಾಗಿ ಕಾದು ಕುಳಿತಿದೆ ಮಣ್ಣು,
ಒಣಗಿದ ಕೆರೆಯಲಿ ಬಿರುಕುಗಳ ಕಣ್ಣು;
ಬೇಸಿಗೆಯ ಬೇಗೆ ಸುಟ್ಟರೂ ಈ ಜಗವ,
ಮುಂದಿನ ಮಳೆಗೆ ಇದು ಹೊಸ ಆಹ್ವಾನ.

– ಪವಿತ್ರ ಬಡಿಗೇರ್

**ರೈಲ್ವೆ ಹೋರಾಟಗಾರರಿಗೆ ಜಿಲ್ಲಾ ವಿಕಾಸ ವೇದಿಕೆಯಿಂದ ಸನ್ಮಾನ ಕಾರ್ಯಕ್ರಮದಲ್ಲಿ ಒತ್ತಾಯ**

# ಗದಗ-ಹರಪನಹಳ್ಳಿ ರೈಲು ಮಾರ್ಗ ಶೀಘ್ರ ಜಾರಿಗೆ ಆಗ್ರಹ

■ **ವಿಜಯಸಾಕ್ಷಿ ಸುದ್ದಿ, ಗದಗ**

ಉತ್ತರ ಕರ್ನಾಟಕ ಭಾಗದ ಜನರ ಬಹುಕಾಲದ ಕನಸಾಗಿರುವ ಗದಗ–ಹರಪನಹಳ್ಳಿ ರೈಲು ಮಾರ್ಗ ಯೋಜನೆ ಶೀಘ್ರ ಜಾರಿಗೆ ಬರಬೇಕು ಎಂದು ಗದಗ–ಹರಪನಹಳ್ಳಿ ರೈಲ್ವೆ ಹೋರಾಟ ಸಮಿತಿ ಸಂಸ್ಥಾಪಕ ಬಸವರಾಜ ನವಲಗುಂದ ಕೇಂದ್ರ ಸರ್ಕಾರವನ್ನು ಒತ್ತಾಯಿಸಿದರು.

ನಗರದ ಪ್ರವಾಸಿ ಮಂದಿರದಲ್ಲಿ ಗುರುವಾರ ಗದಗ ಜಿಲ್ಲಾ ವಿಕಾಸ ವೇದಿಕೆ ವತಿಯಿಂದ ಆಯೋಜಿಸಿದ್ದ ಸನ್ಮಾನ ಸಮಾರಂಭದಲ್ಲಿ ರೈಲ್ವೆ ಹೋರಾಟ ಸಮಿತಿಯ ಪದಾಧಿಕಾರಿಗಳು ಹಾಗೂ ಸದಸ್ಯರನ್ನು ಸನ್ಮಾನಿಸಿದ ಬಳಿಕ ಅವರು ಮಾತನಾಡಿದರು.

ಗದಗ–ಹರಪನಹಳ್ಳಿ ರೈಲು ಮಾರ್ಗ ಜಾರಿಯಾದರೆ ಗದಗ ಸೇರಿದಂತೆ ಉತ್ತರ ಕರ್ನಾಟಕ ಭಾಗದ ಜನರಿಗೆ ವ್ಯಾಪಾರ, ಶಿಕ್ಷಣ, ಆರೋಗ್ಯ ಹಾಗೂ ಉದ್ಯೋಗ



ಕ್ಷೇತ್ರಗಳಲ್ಲಿ ಮಹತ್ತರ ಅನುಕೂಲತೆ ದೊರೆಯಲಿದೆ ಎಂದು ಹೇಳಿದರು.

ಈ ಮಾರ್ಗಕ್ಕಾಗಿ ದೆಹಲಿ, ಬೆಂಗಳೂರು, ಹುಬ್ಬಳ್ಳಿ ಸೇರಿದಂತೆ ವಿವಿಧ ಸ್ಥಳಗಳಲ್ಲಿ ರೈಲ್ವೆ ಇಲಾಖೆ ಹಾಗೂ ರೈಲ್ವೆ ಸಚಿವರ ಗಮನ ಸೆಳೆಯುವ ನಿಟ್ಟಿನಲ್ಲಿ ಮನವಿ, ಪ್ರತಿಭಟನೆ ಹಾಗೂ ಹೋರಾಟಗಳನ್ನು ನಡೆಸಲಾಗಿದೆ. ಈಗಾಗಲೇ ಕೇಂದ್ರ ಸರ್ಕಾರ ಸರ್ವೆ ಕಾರ್ಯಕ್ಕಾಗಿ 9 ಲಕ್ಷ ಅನುದಾನ ಮೀಸಲಿಟ್ಟಿರುವುದು ಯೋಜನೆ ಅನುಷ್ಠಾನದ ಭರವಸೆಯನ್ನು ಮತ್ತಷ್ಟು ಹೆಚ್ಚಿಸಿದೆ ಎಂದು ತಿಳಿಸಿದರು.

ಸನ್ಮಾನ ಸಮಾರಂಭದಲ್ಲಿ ಮಾತನಾಡಿದ ಗದಗ ಜಿಲ್ಲಾ ವಿಕಾಸ ವೇದಿಕೆ ಅಧ್ಯಕ್ಷ ವಿಶ್ವನಾಥ ಖಾನಾಪೂರ, ಈ ರೈಲು ಮಾರ್ಗಕ್ಕಾಗಿ ಹರಪನಹಳ್ಳಿ ಶಾಸಕಿಯಾದ ಲತಾ ಮಲ್ಲಿಕಾರ್ಜುನ, ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಹೆಚ್.ಕೆ. ಪಾಟೀಲ, ಮಾಜಿ ಸಚಿವ ಎಸ್.ಎಸ್. ಪಾಟೀಲ, ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಸೇರಿದಂತೆ ಹಲವು ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳಿಗೆ ಮನವಿ ಸಲ್ಲಿಸಲಾಗಿದೆ ಎಂದು ಹೇಳಿದರು.

ವಿಜಯನಗರ ಹಾಗೂ ಗದಗ ಜಿಲ್ಲೆಯ ಜನಪ್ರತಿನಿಧಿಗಳ ಗಮನಕ್ಕೂ ಈ ಯೋಜನೆ ತರಲಾಗಿದ್ದು, ಈ ಮಾರ್ಗ ಪೂರ್ಣಗೊಂಡರೆ ಬಾಗಲಕೋಟೆ, ವಿಜಯಪುರ ಭಾಗದ ಜನರಿಗೆ ಬೆಂಗಳೂರಿಗೆ ಸಂಪರ್ಕ ಇನ್ನಷ್ಟು ಸುಲಭವಾಗಲಿದೆ ಎಂದು ತಿಳಿಸಿದರು.

> "ಗದಗ–ಹರಪನಹಳ್ಳಿ ರೈಲು ಮಾರ್ಗ ಜಾರಿಯಾದರೆ ಗದಗ ಜಂಕ್ಷನ್‌ಗೆ ಹೊಸ ಮಹತ್ವ ದೊರೆಯಲಿದೆ. ಉದ್ಯೋಗ, ವ್ಯಾಪಾರ ಹಾಗೂ ಸಂಪರ್ಕ ವ್ಯವಸ್ಥೆಯಲ್ಲಿ ಜಿಲ್ಲೆಗೆ ಹೊಸ ಬೆಳವಣಿಗೆ ಸಾಧ್ಯವಾಗಲಿದೆ."
> **– ವಿಶ್ವನಾಥ ಖಾನಾಪೂರ, ಅಧ್ಯಕ್ಷರು, ಗದಗ ಜಿಲ್ಲಾ ವಿಕಾಸ ವೇದಿಕೆ**

ನಗರಸಭೆ ಮಾಜಿ ಸದಸ್ಯ ಮಂಜುನಾಥ ಹೇಮಣ್ಣ ಮುಳಗುಂದ ಮಾತನಾಡಿ, ರೈಲು ಮಾರ್ಗದಿಂದ ಜಿಲ್ಲೆಯ ವ್ಯಾಪಾರ ವಹಿವಾಟು ಹಾಗೂ ಅಭಿವೃದ್ಧಿಗೆ ಹೊಸ ವೇಗ ಸಿಗಲಿದೆ ಎಂದು ಅಭಿಪ್ರಾಯಪಟ್ಟರು.

ಇನ್ನೋರ್ವ ಮಾಜಿ ಸದಸ್ಯ ಎಂ.ಎಸ್. ಪರ್ವತಗೌಡ ಮಾತನಾಡಿ, ಭೂಸ್ವಾಧೀನ ಹಾಗೂ ಸರ್ವೆ ಕಾರ್ಯ ಶೀಘ್ರ ಪೂರ್ಣಗೊಳ್ಳಬೇಕು. ಜೊತೆಗೆ ನಿರ್ಮಾಣವಾಗುವ ನಿಲ್ದಾಣಗಳು ಸಾರ್ವಜನಿಕರಿಗೆ ಅನುಕೂಲಕರ ಸ್ಥಳಗಳಲ್ಲಿ ಇರಬೇಕು ಎಂದು ಒತ್ತಾಯಿಸಿದರು.

ಸಮಾರಂಭದಲ್ಲಿ ಚನ್ನಕೇಶವ ಹಿರೇಮಠ, ರಜಾಕ್ ನೂರಬಾಷಾ, ಶಿವರಾಚಯ್ಯ ಹೊಸಳ್ಳಿಮಠ, ಶಿವಮೂರ್ತಯ್ಯ ಪುರಾಣಿಕಮಠ, ರವಿಗೌಡ ಎಂ. ಪಾಟೀಲ, ರಫೀಕ್ ಕಿತ್ತೂರು, ರಮೇಶ್ ಮಡಿವಾಳರ, ಅರವಿಂದ ಕಾಂಬಳೆ, ಪ್ರಹ್ಲಾದ ಮಾಂಡ್ರೆ, ವೆಂಕಟೇಶ ಕಬಾಡಿ, ಸುರೇಶ ಪವಾರ, ಪ್ರಕಾಶ್ ನಾಯರ್, ಪವನ ಜೈನ್, ಹುಚ್ಚಪ್ಪ ಸಂದಕದ ಸೇರಿದಂತೆ ಹಲವರು ಉಪಸ್ಥಿತರಿದ್ದರು.

**30 ಸದಸ್ಯ ಸ್ಥಾನಗಳ ಕರಡು ಪ್ರಕಟಣೆಗೆ ಬಸವರಾಜ ಮುಳ್ಳಾಳ ಆಕ್ಷೇಪಣೆ**

# ಲಕ್ಕುಂಡಿ ಗ್ರಾ.ಪಂ ಸದಸ್ಯ ಸ್ಥಾನ 35ಕ್ಕೆ ಹೆಚ್ಚಿಸಲು ಆಗ್ರಹ

■ **ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ**

ಗದಗ ಜಿಲ್ಲೆಯಲ್ಲಿಯೇ ಅತಿದೊಡ್ಡ ಗ್ರಾಮ ಪಂಚಾಯತಿಗಳಲ್ಲೊಂದಾದ ಲಕ್ಕುಂಡಿ ಗ್ರಾಮ ಪಂಚಾಯತಿಯಲ್ಲಿ ಪ್ರಸ್ತುತ ಇರುವ 30 ಚುನಾಯಿತ ಸದಸ್ಯ ಸ್ಥಾನಗಳನ್ನು 35ಕ್ಕೆ ಹೆಚ್ಚಿಸಬೇಕು ಎಂದು ಗದಗ ಜಿಲ್ಲಾ ವಿಭಾಗ ಮಟ್ಟದ ಎಸ್.ಸಿ–ಎಸ್.ಟಿ ದೌರ್ಜನ್ಯ ನಿಯಂತ್ರಣ ಜಾಗೃತಿ ಮೇಲುಸ್ತುವಾರಿ ಸಮಿತಿ ಸದಸ್ಯ ಬಸವರಾಜ ಮುಳ್ಳಾಳ ಆಗ್ರಹಿಸಿದ್ದಾರೆ.

ಈ ಕುರಿತು ಕರ್ನಾಟಕ ಪಂಚಾಯತ್ ರಾಜ್ ಸೀಮಾ ನಿರ್ಣಯ ಆಯೋಗ, ಬೆಂಗಳೂರು ಅವರಿಗೆ ಆಕ್ಷೇಪಣೆ ಸಲ್ಲಿಸಿರುವ ಅವರು, ಗ್ರಾಮ ಪಂಚಾಯತಿ ಚುನಾಯಿತ ಸದಸ್ಯ ಸ್ಥಾನಗಳ ಪ್ರಕರಣ 5(1)ರ ಅನ್ವಯ ಹೊರಡಿಸಿರುವ ಕರಡು ಪ್ರಕಟಣೆ ಅವೈಜ್ಞಾನಿಕವಾಗಿದೆ ಎಂದು ಆರೋಪಿಸಿದ್ದಾರೆ.



ಲಕ್ಕುಂಡಿ ಗ್ರಾಮ ಪಂಚಾಯತಿ ಗದಗ ಜಿಲ್ಲೆಯಲ್ಲಿಯೇ ಅತಿ ದೊಡ್ಡ ಪಂಚಾಯತಿಯಾಗಿದ್ದು, ಸುಮಾರು 25 ಸಾವಿರ ಜನಸಂಖ್ಯೆ ಹೊಂದಿದೆ. 10 ಸಾವಿರಕ್ಕೂ ಅಧಿಕ ಮತದಾರರಿದ್ದು, ಗ್ರಾಮವು ವ್ಯಾಪಕ ವಿಸ್ತಾರ ಹೊಂದಿರುವ ಐತಿಹಾಸಿಕ ಪ್ರದೇಶವಾಗಿದೆ. ಇಂತಹ ದೊಡ್ಡ ಪಂಚಾಯತಿಗೆ ಹಿಂದಿನಂತೆಯೇ 30 ಸದಸ್ಯ ಸ್ಥಾನಗಳನ್ನು ಮಾತ್ರ ನಿಗದಿಪಡಿಸಿರುವುದು ಸಮಂಜಸವಲ್ಲ ಎಂದು ತಿಳಿಸಿದ್ದಾರೆ.

ಜನಸಂಖ್ಯೆ, ಕ್ಷೇತ್ರದ ವಿಸ್ತೀರ್ಣ ಹಾಗೂ ಮತದಾರರ ಸಂಖ್ಯೆಯನ್ನು ಪರಿಗಣಿಸಿ ಸದಸ್ಯ ಸ್ಥಾನಗಳನ್ನು 35ಕ್ಕೆ ಹೆಚ್ಚಿಸಿ ಹೊಸದಾಗಿ ಕರಡು ಪ್ರಕಟಣೆ ಹೊರಡಿಸಬೇಕು ಎಂದು ಬಸವರಾಜ ಮುಳ್ಳಾಳ ಆಯೋಗಕ್ಕೆ ಮನವಿ ಮಾಡಿದ್ದಾರೆ.

> "ಲಕ್ಕುಂಡಿ ಗ್ರಾಮ ಪಂಚಾಯತಿ ವ್ಯಾಪ್ತಿ, ಜನಸಂಖ್ಯೆ ಹಾಗೂ ಮತದಾರರ ಸಂಖ್ಯೆಗೆ ಅನುಗುಣವಾಗಿ ಸದಸ್ಯ ಸ್ಥಾನಗಳನ್ನು ಹೆಚ್ಚಿಸುವುದು ಅಗತ್ಯ."
> **– ಬಸವರಾಜ ಮುಳ್ಳಾಳ, ಸದಸ್ಯರು, ಜಿಲ್ಲಾ ಮಟ್ಟದ ಎಸ್.ಸಿ–ಎಸ್.ಟಿ ದೌರ್ಜನ್ಯ ನಿಯಂತ್ರಣ ಜಾಗೃತಿ ಮೇಲುಸ್ತುವಾರಿ ಸಮಿತಿ**

# ಶ್ರೀ ಕರೆವಾಡಿಮಠದ ಮಂಜುನಾಥಯ್ಯ ದೇವರಿಗೆ ಪಿಎಚ್‌ಡಿ ಪದವಿ

■ **ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ಧಾರ್ಮಿಕ ಪರಂಪರೆಯುಳ್ಳ ಶ್ರೀ ಕರೆವಾಡಿಮಠದ ಉತ್ತರಾಧಿಕಾರಿ ಮಂಜುನಾಥಯ್ಯ ದೇವರು "ಶಕ್ತಿವಿಶಿಷ್ಟಾದ್ವೈತ ಮತ್ತು ಹೊನ್ನಾಳಿ ಹಿರೇಕಲ್ಮಠ" ವಿಷಯದ ಸಂಶೋಧನಾ ಮಹಾಪ್ರಬಂಧ ಮಂಡನೆಗಾಗಿ ಕುವೆಂಪು ವಿಶ್ವವಿದ್ಯಾಲಯದಿಂದ ಪಿಎಚ್‌ಡಿ ಪದವಿ ಪಡೆದಿದ್ದಾರೆ.

ಬುಧವಾರ ಶಿವಮೊಗ್ಗದ ಕುವೆಂಪು ವಿಶ್ವವಿದ್ಯಾಲಯದಲ್ಲಿ ನಡೆದ 35ನೇ ಘಟಿಕೋತ್ಸವದಲ್ಲಿ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರು ಮಂಜುನಾಥಯ್ಯ ದೇವರಿಗೆ ಪಿಎಚ್‌ಡಿ ಪದವಿ ಪ್ರದಾನ ಮಾಡಿದರು.

ಈ ಸಂದರ್ಭದಲ್ಲಿ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಶರತ್ ಅನಂತಮೂರ್ತಿ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು. ಸಂಶೋಧನಾ ಕಾರ್ಯಕ್ಕೆ ಪ್ರೊ. ನೆಲ್ಲಿಕಟ್ಟೆ ಎಸ್. ಸಿದ್ದೇಶ್ ಮಾರ್ಗದರ್ಶನ ನೀಡಿದ್ದಾರೆ.

ಪಿಎಚ್‌ಡಿ ಪದವಿ ಪಡೆದ ಮಂಜುನಾಥಯ್ಯ ದೇವರಿಗೆ ಲಕ್ಷ್ಮೇಶ್ವರದ ಜನತೆ ಹಾಗೂ ಶ್ರೀಮಠದ ಭಕ್ತರು ಹರ್ಷ ವ್ಯಕ್ತಪಡಿಸಿದ್ದಾರೆ.




**ಕುಸಿದು ಹೋಗಿರುವ ಗಟಾರದ ಮೇಲ್ಸೇತುವೆ ದುರಸ್ತಿಗೆ ಗ್ರಾಮಸ್ಥರ ಆಗ್ರಹ; ಅಪಾಯದ ನಡುವೆ ಸಂಚಾರ!**

# ಕೋಡಿಕೊಪ್ಪದಲ್ಲಿ ಬಲಿಗಾಗಿ ಕಾದಿರುವ ಸಿಡಿ

■ **ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಪಟ್ಟಣದ ಮಜರೆ ಗ್ರಾಮವಾದ ಕೋಡಿಕೊಪ್ಪದ ಅಣ್ಣಿಗೇರಿಯವರ ಓಣಿಯಲ್ಲಿ ಗಟಾರದ ಮೇಲಿನ ಸಿಡಿಯೊಂದು ಕುಸಿದು ಅಪಾಯಕಾರಿಯಾಗಿ ಮಾರ್ಪಟ್ಟಿದ್ದು, ಯಾವ ಕ್ಷಣದಲ್ಲಾದರೂ ಅವಘಡ ಸಂಭವಿಸುವ ಭೀತಿ ಎದುರಾಗಿದೆ.

ಅಬ್ಬಿಗೇರಿ ಮುಖ್ಯ ರಸ್ತೆಯ ಸಮೀಪದ ಬನಶಂಕರಿ ಹೋಟೆಲ್ ಪಕ್ಕದಲ್ಲಿರುವ ಈ ಸಿಡಿಯನ್ನು ತಕ್ಷಣ ದುರಸ್ತಿ ಮಾಡಬೇಕು ಎಂದು ಗ್ರಾಮಸ್ಥರು ಪಟ್ಟಣ ಪಂಚಾಯತಿಗೆ ಆಗ್ರಹಿಸಿದ್ದಾರೆ.

ಅಬ್ಬಿಗೇರಿ ಮುಖ್ಯ ರಸ್ತೆಯನ್ನು ಸಂಪರ್ಕಿಸುವ ಪ್ರಮುಖ ರಸ್ತೆಯ ಮೇಲಿರುವ ಈ ಸಿಡಿ, ಕಳಪೆ ಕಾಮಗಾರಿಯಿಂದ ನಿರ್ಮಾಣಗೊಂಡ ಕೆಲವೇ ವರ್ಷಗಳಲ್ಲಿ ಹಾನಿಗೊಳಗಾಗಿದೆ. ಈಗ ಸಿಡಿಯ ಅಸ್ಥಿಪಂಜರ ಮಾತ್ರ ಕಾಣಿಸುತ್ತಿದ್ದು, ಸಾರ್ವಜನಿಕರು, ಮಕ್ಕಳು ಹಾಗೂ ವೃದ್ಧರು ಸಂಚರಿಸುವಾಗ ಅಪಾಯದ ಭೀತಿ ಹೆಚ್ಚಾಗಿದೆ ಎಂದು ಸ್ಥಳೀಯರು ಆತಂಕ ವ್ಯಕ್ತಪಡಿಸಿದ್ದಾರೆ.

ವಿದ್ಯುತ್ ಸಂಪರ್ಕವಿಲ್ಲದ ಸಂದರ್ಭದಲ್ಲಿ ರಾತ್ರಿ ವೇಳೆ ಯಾರಾದರೂ ಈ ತಗ್ಗಿನಲ್ಲಿ ಬಿದ್ದರೆ ಯಾರು ಹೊಣೆ ಎಂಬ ಪ್ರಶ್ನೆ ಗ್ರಾಮಸ್ಥರದ್ದು. ಸಿಡಿಯ ದುಸ್ಥಿತಿಯಿಂದಾಗಿ ದೊಡ್ಡ ವಾಹನಗಳು ಮಾತ್ರವಲ್ಲದೆ ಬೈಕ್‌ಗಳ ಸಂಚಾರವೂ ಕಷ್ಟಕರವಾಗಿದೆ.

ಇನ್ನಷ್ಟು ದಿನ ಕಳೆದರೆ ಸಿಡಿ ಸಂಪೂರ್ಣ ಕುಸಿದು, ಓಣಿಯ ಜನರು ಮುಖ್ಯ ರಸ್ತೆಯ ಸಂಪರ್ಕ ಕಳೆದುಕೊಳ್ಳುವ ಪರಿಸ್ಥಿತಿ ಎದುರಾಗಬಹುದು ಎಂದು ನಿವಾಸಿಗಳು ಎಚ್ಚರಿಸಿದ್ದಾರೆ.



> "ಸಿಡಿಯ ದುಸ್ಥಿತಿಯಿಂದ ಸಾರ್ವಜನಿಕರು ಭಯದಲ್ಲೇ ಓಡಾಡುತ್ತಿದ್ದಾರೆ. ದೊಡ್ಡ ಅನಾಹುತ ಸಂಭವಿಸುವ ಮೊದಲು ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು."
> **– ವೀರಭದ್ರಪ್ಪ ಕೆರಿಯವರ, ಸ್ಥಳೀಯ ನಿವಾಸಿ**

ಪಟ್ಟಣ ಪಂಚಾಯತಿ ಸಿಬ್ಬಂದಿ ಹಲವು ಬಾರಿ ಸ್ಥಳ ವೀಕ್ಷಣೆ ಮಾಡಿದರೂ ದುರಸ್ತಿ ಕಾರ್ಯ ಕೈಗೊಳ್ಳಲಾಗಿಲ್ಲ ಎಂದು ಗ್ರಾಮಸ್ಥ ವೀರಭದ್ರಪ್ಪ ಕೆರಿಯವರ ಆರೋಪಿಸಿದರು.

ಅಪಾಯ ತಪ್ಪಿಸಲು ಸ್ಥಳದಲ್ಲಿ ದೊಡ್ಡ ಕಲ್ಲುಗಳನ್ನು ಇಡಲಾಗಿದ್ದು, ಸಿಡಿಯೊಳಗಿನ ಕಬ್ಬಿಣಗಳು ತುಕ್ಕು ಹಿಡಿದಿರುವುದರಿಂದ ಅವುಗಳ ಬಲವೂ ಕುಂದಿದೆ ಎಂದು ಅವರು ಹೇಳಿದರು.

ಈ ಕುರಿತು ಪಟ್ಟಣ ಪಂಚಾಯತಿಗೆ ಮನವಿ ಸಲ್ಲಿಸಲಾಗಿದ್ದು, ವೃಷಭೇಂದ್ರಯ್ಯ ಅಣ್ಣಿಗೇರಿಮಠ, ಶೇಖಪ್ಪ ಹೆಬ್ಬಳ್ಳಿ, ವೀರಭದ್ರಪ್ಪ ಕೆರಿಯವರ, ಕಳಕಪ್ಪ ಹಡಪದ, ಮೌಲಾ ಮಾಟಲದಿನ್ನಿ, ಸಿದ್ಲಿಂಗಪ್ಪ ಹಡಪದ, ಕಳಕಪ್ಪ ಕೆರಿಯವರ, ಆನಂದ ಹೆಗಡೆ, ವೀರಪ್ಪ ಹೆಬ್ಬಳ್ಳಿ ಸೇರಿದಂತೆ ಹಲವರು ಸಹಿ ಮಾಡಿದ್ದಾರೆ.

ಬೇಗನೆ ದುರಸ್ತಿ ಕಾರ್ಯ ಕೈಗೊಳ್ಳದಿದ್ದರೆ ಪಟ್ಟಣ ಪಂಚಾಯತಿ ಕಚೇರಿ ಎದುರು ಪ್ರತಿಭಟನೆ ನಡೆಸುವುದಾಗಿ ಗ್ರಾಮಸ್ಥರು ಎಚ್ಚರಿಸಿದ್ದಾರೆ.

**ತಾಯಿಯ ಪ್ರೀತಿ, ತ್ಯಾಗ ಮತ್ತು ಮಮತೆಗೆ ಕೃತಜ್ಞತೆ ಸಲ್ಲಿಸುವ ದಿನವೇ 'ಮದರ್ಸ್ ಡೇ'**

# ತಾಯಿ ಸುಖ ಜೀವನದ ಆಧಾರಸ್ತಂಭ

ತಾಯಿ ಎಂಬ ಪದದಲ್ಲೇ ಅಳಿಯದ ಪ್ರೀತಿ, ಅಕ್ಕರೆಯ ಉಷ್ಣತೆ ಮತ್ತು ತ್ಯಾಗದ ಮಹಿಮೆ ಅಡಗಿದೆ. ಮನುಷ್ಯನ ಜೀವನದ ಮೊದಲ ಗುರು ತಾಯಿಯೇ ಆಗಿದ್ದು, ಮಗು ಹುಟ್ಟಿದ ಕ್ಷಣದಿಂದಲೇ ಅವಳ ಮಮತೆ, ಕಾಳಜಿ ಹಾಗೂ ಮಾರ್ಗದರ್ಶನ ಜೀವನವನ್ನು ರೂಪಿಸುತ್ತವೆ. ಆದ್ದರಿಂದಲೇ ತಾಯಿಯ ಸ್ಥಾನವನ್ನು ದೇವರಿಗಿಂತಲೂ ಉನ್ನತವೆಂದು ಪರಿಗಣಿಸಲಾಗುತ್ತದೆ.

ಪ್ರತಿ ವರ್ಷ ಮೇ ತಿಂಗಳ ಎರಡನೇ ಭಾನುವಾರವನ್ನು ವಿಶ್ವದಾದ್ಯಂತ 'ಮದರ್ಸ್ ಡೇ' ಅಥವಾ ತಾಯಿ ದಿನಾಚರಣೆಯಾಗಿ ಆಚರಿಸಲಾಗುತ್ತದೆ. ಈ ದಿನವು ತಾಯಿಯ ತ್ಯಾಗ, ಸೇವೆ ಮತ್ತು ನಿರಂತರ ಪ್ರೀತಿಗೆ ಕೃತಜ್ಞತೆ ಸಲ್ಲಿಸುವ ವಿಶೇಷ ಸಂದರ್ಭವಾಗಿದೆ.

ತಾಯಿ ತನ್ನ ಮಕ್ಕಳಿಗಾಗಿ ಎಷ್ಟೇ ಕಷ್ಟಪಟ್ಟರೂ ಅದನ್ನು ಎಂದಿಗೂ ಹೇಳಿಕೊಳ್ಳುವುದಿಲ್ಲ. ಮಕ್ಕಳ ಸಂತೋಷದಲ್ಲೇ ತನ್ನ ಸಂತೋಷವನ್ನು ಕಾಣುವ ಅವಳ ಪ್ರೀತಿ ನಿಸ್ವಾರ್ಥವಾಗಿದೆ.

ಇಂದಿನ ವೇಗದ ಬದುಕಿನಲ್ಲಿ ಅನೇಕರು ತಾಯಿಯೊಂದಿಗೆ ಸಮಯ ಕಳೆಯುವುದನ್ನೇ ಮರೆತುಬಿಡುತ್ತಾರೆ. ತಾಯಿ ದಿನವು ಅವಳ ಮಹತ್ವವನ್ನು ನೆನಪಿಸುವ ದಿನವಾಗಿದೆ. ಈ ದಿನ ತಾಯಿಗೆ ಶುಭಾಶಯ ತಿಳಿಸುವುದು, ಉಡುಗೊರೆ ನೀಡುವುದು ಅಥವಾ ಅವಳೊಂದಿಗೆ ಕೆಲ ಕ್ಷಣಗಳನ್ನು ಕಳೆಯುವುದು ಸಂತಸದ ಸಂಗತಿ. ಆದರೆ ತಾಯಿಗೆ




> "ಅಮ್ಮ ಎಂದರೆ ಏನೋ ಹರ್ಷ; ನಮ್ಮ ಪಾಲಿಗೆ ಅವಳೇ ದೈವ."
> **– ವಿಶ್ವಾಸ್ ಸೋಹೊನಿ,** ಬ್ರಹ್ಮಾಕುಮಾರೀಸ್ ಮೀಡಿಯಾ ವಿಂಗ್

ನಿಜವಾದ ಗೌರವವೆಂದರೆ ಪ್ರತಿದಿನವೂ ಅವಳನ್ನು ಪ್ರೀತಿಯಿಂದ ಕಾಣುವುದು ಮತ್ತು ಕೃತಜ್ಞತೆಯಿಂದ ನಡೆದುಕೊಳ್ಳುವುದಾಗಿದೆ.

ತಾಯಿ ಎಂದರೆ ಕೇವಲ ಜನ್ಮ ನೀಡುವವಳು ಮಾತ್ರವಲ್ಲ; ಜೀವನದ ಪ್ರತಿಯೊಂದು ಹೆಜ್ಜೆಯಲ್ಲೂ ನಮ್ಮನ್ನು ಬೆಂಬಲಿಸುವ ಶಕ್ತಿ. ಅವಳ ಮಮತೆ ಅಳಿಯದು, ಪ್ರೀತಿ ಅಸೀಮ. ತಾಯಿಯ ಮಹತ್ವವನ್ನು ಪದಗಳಲ್ಲಿ ಸಂಪೂರ್ಣವಾಗಿ ವಿವರಿಸಲು ಸಾಧ್ಯವಿಲ್ಲ.

ಮದರ್ ತೆರೆಸಾ, ಕಿತ್ತೂರು ರಾಣಿ ಚೆನ್ನಮ್ಮ, ಜಿಜಾಬಾಯಿ, ಝಾನ್ಸಿ ರಾಣಿ ಲಕ್ಷ್ಮೀಬಾಯಿ, ಜಗದಂಬ ಸರಸ್ವತಿ ಸೇರಿದಂತೆ ಅನೇಕ ಮಹನೀಯ ಮಾತೆಯರು ತಮ್ಮ ಜೀವನವನ್ನು ಸಮಾಜ ಸೇವೆಗೆ ಅರ್ಪಿಸಿ ಮಹಿಳಾ ಶಕ್ತಿಗೆ ಆದರ್ಶವಾಗಿದ್ದಾರೆ.

ಈ ಹಿನ್ನೆಲೆಯಲ್ಲಿ ಬ್ರಹ್ಮಾಕುಮಾರಿ ಈಶ್ವರೀಯ ವಿಶ್ವವಿದ್ಯಾಲಯವು ವಿವಿಧ ಮಹಿಳಾ ಸಂಘಟನೆಗಳ ಸಹಯೋಗದಲ್ಲಿ ಮಹಿಳೆಯರ ಉದ್ಧಾರ ಮತ್ತು ಸಬಲೀಕರಣಕ್ಕಾಗಿ ಹಲವು ಕಾರ್ಯಕ್ರಮಗಳನ್ನು ರೂಪಿಸಿಕೊಂಡಿದೆ.

ನದಿಗಳಿಗೆ "ಮಾತೆ", ಭಾಷೆಗೆ "ಮಾತೃಭಾಷೆ" ಎಂದು ಕರೆಯುವ ಸಂಪ್ರದಾಯವೂ ತಾಯಿಯ ಸ್ಥಾನಮಾನವನ್ನು ಪ್ರತಿಬಿಂಬಿಸುತ್ತದೆ. ಜಗತ್ತಿನ ಶ್ರೇಷ್ಠ ತಾಯಿ ಎಂದರೆ ಪರಮಾತ್ಮನ ಸೃಷ್ಟಿಶಕ್ತಿ ಎಂಬ ಭಾವನೆಯೂ ಭಾರತೀಯ ಸಂಸ್ಕೃತಿಯಲ್ಲಿದೆ.

ಸತ್ಯಂ, ಶಿವಂ, ಸುಂದರಂ ಸ್ವರೂಪನಾದ ನಿರಾ–ಕಾರ ಶಿವಪರಮಾತ್ಮನು ಎಲ್ಲ ಮಾತೆಯರಿಗೆ, ಮಹಿಳೆಯರಿಗೆ ಮತ್ತು ತಾಯಂದಿರಿಗೆ ಶಕ್ತಿ, ಆರೋಗ್ಯ ಹಾಗೂ ಸುಖಶಾಂತಿ ನೀಡಲಿ ಎಂದು ಪ್ರಾರ್ಥಿಸೋಣ.

# ಪಾಲಿಟೆಕ್ನಿಕ್ ಪ್ರವೇಶಾತಿ ಆರಂಭ

■ **ವಿಜಯಸಾಕ್ಷಿ ಸುದ್ದಿ, ರೋಣ**

ರೋಣ ಪಟ್ಟಣದಲ್ಲಿ ಪ್ರಸಕ್ತ ಸಾಲಿನಿಂದ ಸರಕಾರಿ ಪಾಲಿಟೆಕ್ನಿಕ್ ಕಾಲೇಜು ಆರಂಭಗೊಂಡಿದ್ದು,ಪ್ರವೇಶಾತಿ ಕೂಡ ನಡೆದಿದೆ.ಹಿಗಾಗಿ ವಿದ್ಯಾರ್ಥಿಗಳು ಲಾಭ ಪಡೆದುಕೊಳ್ಳಬೇಕು ಎಂದು ಪ್ರಾಚಾರ್ಯರು ತಮ್ಮ ಪ್ರಕಟನೆಯಲ್ಲಿ ತಿಳಿಸಿದ್ದಾರೆ. ಪ್ರಸಕ್ತ ಸಾಲಿನಿಂದ ಕಾಲೇಜು ಆರಂಭಗೊಂಡಿದ್ದು ಸುಸಜ್ಜಿತ ಕಟ್ಟಡ ಹಾಗೂ ಪ್ರಯೋಗಾಲಯವನ್ನು ಕೂಡ ಹೊಂದಿದೆ.ಉನ್ನತ ಮಟ್ಟದ ಉಪನ್ಯಾಸಕರನ್ನು ಹೊಂದಿದ್ದು ಡಿಪ್ಲೋಮಾ ಎಂಜನಿಯರಿಂಗ್ ಪ್ರವೇಶಾತಿಗೆ ಅಧಿಸೂಚನೆ ಹೊರಡಿಸಲಾಗಿದೆ, ಪ್ರವೇಶ ಬಯಸುವ ವಿದ್ಯಾರ್ಥಿಗಳು 10 ನೇ ತರಗತಿ ಪಾಸಾಗಿರಬೇಕು ಜೊತೆಗೆ ಮೊದಲು ಬಂದವರಿಗೆ ಆದ್ಯತೆಯನ್ನು ನಿಡಲಾಗುವುದು ಎಂದು ಪ್ರಚಾರ್ಯ ಮಹಾಂತೇಶ ಗುಡ್ಡಿನ್ ಪ್ರಕಟನೆಯಲ್ಲಿ ತಿಳಿಸಿದ್ದಾರೆ.

# ಪಂಚಮಸಾಲಿ ಸಮಾಜದಿಂದ ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನ

■ **ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ತಾಲೂಕು ಪಂಚಮಸಾಲಿ ಸಮಾಜದ ವತಿಯಿಂದ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿಯಲ್ಲಿ ಶೇ.85ಕ್ಕೂ ಹೆಚ್ಚು ಅಂಕ ಪಡೆದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಸಮಾರಂಭವನ್ನು ಮೇ 12ರಂದು ಆಯೋಜಿಸಲಾಗಿದೆ ಎಂದು ಸಮಾಜದ ರಾಜ್ಯ ಗೌರವಾಧ್ಯಕ್ಷ ಭಾವಿ ಬೆಟ್ಟಪ್ಪ ತಿಳಿಸಿದ್ದಾರೆ. ಪಟ್ಟಣದ ಪಂಚಮಸಾಲಿ ಭವನದಲ್ಲಿ ನಡೆದ ಸಭೆಯಲ್ಲಿ ಮಾತನಾಡಿದ ಅವರು, ರಾಜ್ಯದ ಯಾವುದೇ ಜಿಲ್ಲೆಯ ತಾಲೂಕುಗಳಲ್ಲಿ ವ್ಯಾಸಂಗ ಮಾಡಿದ ಹಗರಿಬೊಮ್ಮನಹಳ್ಳಿ ತಾಲೂಕಿನ ವಿದ್ಯಾರ್ಥಿಗಳು ಹಾಗೂ ತಾಲೂಕಿನಿಂದ ಬೇರೆ ತಾಲೂಕುಗಳಲ್ಲಿ ವ್ಯಾಸಂಗ ಮಾಡಿದ ವಿದ್ಯಾರ್ಥಿಗಳು ಪುರಸ್ಕಾರಕ್ಕೆ ಅರ್ಹರಾಗಿರುತ್ತಾರೆ ಎಂದು ಹೇಳಿದರು. ಪುರಸ್ಕಾರಕ್ಕೆ ಅರ್ಹ ವಿದ್ಯಾರ್ಥಿಗಳು ತಮ್ಮ ಅಂಕಪಟ್ಟಿ, ಆಧಾರ್ ಕಾರ್ಡ್ ಹಾಗೂ ಎರಡು ಭಾವಚಿತ್ರಗಳೊಂದಿಗೆ ಮೇ 12ರೊಳಗಾಗಿ ಪಟ್ಟಣದ ಪಂಚಮಸಾಲಿ ಭವನದ ಕಚೇರಿಯಲ್ಲಿ ನೋಂದಾಯಿಸಿಕೊಳ್ಳಬೇಕು ಎಂದು ತಿಳಿಸಿದರು. ಸಮಾಜದ ತಾಲೂಕು ಅಧ್ಯಕ್ಷ ಬಿ. ಮಂಜುನಾಥ ಗೌಡ ಮಾತನಾಡಿ, ಕಾರ್ಯಕ್ರಮವನ್ನು ಶಾಸಕ ಕೆ. ನೇಮರಾಜ ನಾಯ್ಕ ಉದ್ಘಾಟಿಸಲಿದ್ದು, ಗದ್ದಿಕೇರಿ ವಿರಕ್ತಮಠದ ಇಮ್ಮಡಿ ಮಹಾಂತ ಸ್ವಾಮೀಜಿ ಹಾಗೂ ನಿಡಸೋಸಿ ನಿಜಲಿಂಗೇಶ್ವರ ಸ್ವಾಮೀಜಿ ಸಾನ್ನಿಧ್ಯ ವಹಿಸಲಿದ್ದಾರೆ ಎಂದು ಮಾಹಿತಿ ನೀಡಿದರು. ಹೆಚ್ಚಿನ ಮಾಹಿತಿಗಾಗಿ 9880767688 (ಬಾವಿ ರವೀಂದ್ರ) ಹಾಗೂ 9945903670 (ಶಿವಶಂಕರಗೌಡ) ಸಂಖ್ಯೆಯನ್ನು ಸಂಪರ್ಕಿಸಬಹುದಾಗಿದೆ ಎಂದು ತಿಳಿಸಿದರು. ಸಭೆಯಲ್ಲಿ ಸಮಾಜದ ತಾಲೂಕು ಘಟಕದ ಮಾಜಿ ಅಧ್ಯಕ್ಷ ಅಕ್ಕಿ ಶಿವಕುಮಾರ್, ಕಾರ್ಯದರ್ಶಿ ಶಿವಶಂಕರಗೌಡ, ಉಪಾಧ್ಯಕ್ಷ ಎಂ. ಜ್ಯೋತೆಪ್ಪ, ನೌಕರರ ಘಟಕದ ಅಧ್ಯಕ್ಷ ವಿರೂಪಾಕ್ಷ, ತಾಲೂಕು ಮಹಿಳಾ ಘಟಕದ ಅಧ್ಯಕ್ಷೆ ನಿರ್ಮಲಾ ಮೆಣಸಿಗಿ, ನಗರ ಘಟಕದ ಅಧ್ಯಕ್ಷೆ ಮಂಜುಳಾ ವಿರೂಪಾಕ್ಷಗೌಡ, ಜಿಲ್ಲಾ ಸಮಿತಿ ಸದಸ್ಯೆ ಮಂಗಳಾ ಬಸವರಾಜ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಕಬ್ಬು ಬೆಳೆಗಾರರಿಗೆ ಕೇಂದ್ರದ ಸಿಹಿ ಸುದ್ದಿ; 365 ಎಫ್‌ಆರ್‌ಪಿ ಅನುಮೋದನೆ

■ **ವಿಜಯಸಾಕ್ಷಿ ಸುದ್ದಿ, ನವದೆಹಲಿ**

ಸೂರ್ಯಕಾಂತಿ ಬೆಳೆಗಾರರ ಬೆಂಬಲದ ಬಳಿಕ ಇದೀಗ ಕೇಂದ್ರ ಸರ್ಕಾರ ಕಬ್ಬು ಬೆಳೆಗಾರರಿಗೂ ನೆರವಾಗಿದ್ದು, 2026–27ನೇ ಹಂಗಾಮಿಗೆ ಕಬ್ಬಿನ ನ್ಯಾಯೋಚಿತ ಮತ್ತು ಲಾಭದಾಯಕ ಬೆಲೆ (FRP) ಹೆಚ್ಚಳಕ್ಕೆ ಕೇಂದ್ರ ಸಚಿವ ಸಂಪುಟ ಅನುಮೋದನೆ ನೀಡಿದೆ ಎಂದು ಕೇಂದ್ರ ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಪ್ರಲ್ಹಾದ ಜೋಶಿ ತಿಳಿಸಿದ್ದಾರೆ.

ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸಚಿವ ಸಂಪುಟವು ಶೇ.10.25 ಮೂಲ ರಿಕವರಿ ದರದ ಮೇಲೆ ಪ್ರತಿ ಕ್ವಿಂಟಲ್ ಕಬ್ಬಿಗೆ 365 ಎಫ್‌ಆರ್‌ಪಿ ನಿಗದಿಪಡಿಸಿದ್ದು, ಇದರಿಂದ ಕರ್ನಾಟಕದ ಸುಮಾರು 8 ರಿಂದ 10 ಲಕ್ಷ ಕಬ್ಬು ಬೆಳೆಗಾರರಿಗೆ ನೇರ ಪ್ರಯೋಜನವಾಗಲಿದೆ ಎಂದು ಹೇಳಿದ್ದಾರೆ.

ಕಬ್ಬಿನ ರಿಕವರಿಯಲ್ಲಿ ಪ್ರತಿ 0.1 ಶೇಕಡಾ ಏರಿಕೆಗೆ 3.56 ಪ್ರೋತ್ಸಾಹಧನ ನೀಡಲಾಗುವುದು. ಜೊತೆಗೆ ರಿಕವರಿ ದರ 9.5 ಶೇಕಡಾ ಅಥವಾ ಅದಕ್ಕಿಂತ ಕಡಿಮೆ ಇದ್ದರೂ ಯಾವುದೇ ಕಡಿತವಿಲ್ಲದೆ ಪ್ರತಿ ಕ್ವಿಂಟಲ್‌ಗೆ 338.30 ಕನಿಷ್ಠ ಬೆಂಬಲ ಬೆಲೆ ನೀಡಲು ತೀರ್ಮಾನಿಸಲಾಗಿದೆ ಎಂದು ವಿವರಿಸಿದ್ದಾರೆ.

ಕೇಂದ್ರ ಸರ್ಕಾರದ ಈ ನಿರ್ಧಾರದಿಂದ ದೇಶದ ಸುಮಾರು 5 ಕೋಟಿ ಕಬ್ಬು ಬೆಳೆಗಾರರು ಹಾಗೂ ಅವರ ಕುಟುಂಬಗಳಿಗೆ ಅನುಕೂಲವಾಗಲಿದ್ದು, ಕರ್ನಾಟಕದಲ್ಲಿಯೂ ಲಕ್ಷಾಂತರ ರೈತರು ಇದರ ಲಾಭ ಪಡೆಯಲಿದ್ದಾರೆ ಎಂದು ತಿಳಿಸಿದ್ದಾರೆ.

ಈ ಬೆಲೆ ಹೆಚ್ಚಳವು ಕಬ್ಬು ಬೆಳೆಗಾರರಿಗೆ ಮಾತ್ರವಲ್ಲದೆ ಸಕ್ಕರೆ ಕಾರ್ಖಾನೆಗಳು ಹಾಗೂ ಸಕ್ಕರೆ ಉದ್ಯಮದ 5 ಲಕ್ಷಕ್ಕೂ ಅಧಿಕ ಕಾರ್ಮಿಕರಿಗೂ ನೆರವಾಗಲಿದೆ. ಕೃಷಿ ಮತ್ತು ಸಕ್ಕರೆ ಉದ್ಯಮವನ್ನು ಮತ್ತಷ್ಟು ಸಶಕ್ತಗೊಳಿಸುವ ಬದ್ಧತೆಯನ್ನು ಪ್ರಧಾನಿ ನರೇಂದ್ರ ಮೋದಿ ತೋರಿದ್ದಾರೆ ಎಂದು ಸಚಿವ ಜೋಶಿ ಹೇಳಿದ್ದಾರೆ.

ಕರ್ನಾಟಕದ ಬೆಳಗಾವಿ, ಬಾಗಲಕೋಟೆ, ಮಂಡ್ಯ, ಮೈಸೂರು, ವಿಜಯಪುರ, ಬಳ್ಳಾರಿ, ದಾವಣಗೆರೆ ಹಾಗೂ ಬೀದರ್ ಜಿಲ್ಲೆಗಳು ಕಬ್ಬು ಬೆಳೆ ಉತ್ಪಾದನೆಯಲ್ಲಿ ಪ್ರಮುಖ ಸ್ಥಾನ ಹೊಂದಿದ್ದು, ದೇಶದ ಒಟ್ಟು ಸಕ್ಕರೆ ಉತ್ಪಾದನೆಯಲ್ಲಿ ರಾಜ್ಯದ ಪಾಲು ಶೇ.16ರಷ್ಟಿದೆ. ಹೀಗಾಗಿ ಎಫ್‌ಆರ್‌ಪಿ ಹೆಚ್ಚಳ ರಾಜ್ಯದ ರೈತರಿಗೆ ಮಹತ್ವದ ನೆರವಾಗಲಿದೆ ಎಂದು ತಿಳಿಸಿದ್ದಾರೆ.

**ಬಿರು ಬೇಸಿಗೆ ಹಿನ್ನೆಲೆಯಲ್ಲಿ ಅಧಿಕಾರಿಗಳ ಸಭೆ; ನೀರು ಸರಬರಾಜು ಸಮರ್ಪಕವಾಗಿರಲು ಶಾಸಕರ ಸೂಚನೆ**

# ಬೇಸಿಗೆ ಸಂದರ್ಭ ನೀರು ಸರಬರಾಜು ಸಮರ್ಪಕವಾಗಿರಲಿ



> "ಈ ಸಲದ ಬೇಸಿಗೆ ಬಿಸಿಲು ಅತ್ಯಂತ ಅಪಾಯಕಾರಿಯಾಗಿದ್ದು, ಜನರಿಗೆ ಕುಡಿಯುವ ನೀರು ವ್ಯತ್ಯಯವಾಗದಂತೆ ನೋಡಿಕೊಳ್ಳಬೇಕು. ಮೇ ತಿಂಗಳಿಡೀ ಬಿರು ಬೇಸಿಗೆ ಮುಂದುವರಿಯಲಿರುವುದರಿಂದ ನೀರಿನ ನಿರ್ವಹಣೆಯನ್ನು ಸರಿಯಾದ ರೀತಿಯಲ್ಲಿ ಮಾಡಬೇಕು"
> – ಕೆ. ನೇಮರಾಜ್ ನಾಯ್ಕ್, ಶಾಸಕ

**■ ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ಈ ಸಲದ ಬೇಸಿಗೆ ಬಿಸಿಲು ಅತ್ಯಂತ ಅಪಾಯಕಾರಿಯಾಗಿದ್ದು, ತಾಲೂಕಿನ ಯಾವುದೇ ಗ್ರಾಮದಲ್ಲಿ ಜನರಿಗೆ ಕುಡಿಯುವ ನೀರು ವ್ಯತ್ಯಯವಾಗದಂತೆ ನೋಡಿಕೊಳ್ಳಬೇಕು ಎಂದು ಶಾಸಕ ಕೆ. ನೇಮರಾಜ್ ನಾಯ್ಕ್ ಹೇಳಿದರು.

ಪಟ್ಟಣದ ಸರ್ಕ್ಯೂಟ್ ಹೌಸ್ (ಪ್ರವಾಸಿ ಮಂದಿರ)ನಲ್ಲಿ ತಾಲೂಕಿನ ಎಲ್ಲಾ ಗ್ರಾಮಗಳಲ್ಲಿ ಕುಡಿಯುವ ನೀರಿನ ಪೂರೈಕೆ ಸರಿಯಾದ ಸಮಯಕ್ಕೆ ಆಗುವಂತೆ ಕ್ರಮ ಕೈಗೊಳ್ಳುವ ಕುರಿತು ನಡೆದ ಸಭೆಯಲ್ಲಿ ಮಾತನಾಡಿದ ಅವರು, ಮೇ ತಿಂಗಳಿಡೀ ಬಿರು ಬೇಸಿಗೆ ಮುಂದುವರಿಯಲಿದ್ದು, ನೀರಿನ ನಿರ್ವಹಣೆಯನ್ನು ಸರಿಯಾದ ರೀತಿಯಲ್ಲಿ ಮಾಡಬೇಕಿದೆ ಎಂದು ಅಧಿಕಾರಿಗಳಿಗೆ ಸೂಚಿಸಿದರು.

ತಾಲೂಕಿನಲ್ಲಿ ಕಾರ್ಯ ಪಡೆ ಸಮಿತಿ ಅತ್ಯಂತ ಕಾರ್ಯ ಶೀಲವಾಗಿದ್ದು, ಎಲ್ಲಾ ಅಧಿಕಾರಿಗಳು ತುರ್ತು ಸಂದರ್ಭಗಳಲ್ಲಿ ಸಮರೋಪಾದಿಯಲ್ಲಿ ಕೆಲಸ ಮಾಡುವ ಸಾಮರ್ಥ್ಯ ಹೊಂದಿದ್ದಾರೆ ಎಂದು ಹೇಳಿದರು.

ಗ್ರಾಮೀಣ ಪ್ರದೇಶಗಳಲ್ಲಿ ನೀರು ಸರಬರಾಜಿನಲ್ಲಿ ಯಾವುದೇ ರೀತಿಯ ತೊಂದರೆ ಆಗದಂತೆ ಮುನ್ನೆಚ್ಚರಿಕಾ ಕ್ರಮ ಕೈಗೊಳ್ಳಬೇಕು. ಸಾರ್ವಜನಿಕರಿಗೆ ಅಗತ್ಯ ಪ್ರಮಾಣದಲ್ಲಿ ಕುಡಿಯುವ ನೀರು ದೊರೆಯುವಂತೆ ನೋಡಿಕೊಳ್ಳಬೇಕು ಎಂದು ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ತಾಲೂಕು ದಂಡಾಧಿಕಾರಿಗಳು, ತಾಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳು, ವಿವಿಧ ಇಲಾಖೆಯ ತಾಲೂಕು ಮಟ್ಟದ ಅಧಿಕಾರಿಗಳು, ಪುರಸಭೆ ಹಾಗೂ ಪಟ್ಟಣ ಪಂಚಾಯಿತಿ ಅಧಿಕಾರಿಗಳು, ಎಲ್ಲಾ ಗ್ರಾಮ ಪಂಚಾಯತಿಯ ಅಭಿವೃದ್ಧಿ ಅಧಿಕಾರಿಗಳು ಉಪಸ್ಥಿತರಿದ್ದರು.

# ಮುತ್ತಪ್ಪ ರೈ ಹುಟ್ಟುಹಬ್ಬ ರೋಗಿಗಳಿಗೆ ಹಾಲು-ಹಣ್ಣು ವಿತರಣೆ




**■ ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ಜಯ ಕರ್ನಾಟಕ ಸಂಘಟನೆಯ ಸಂಸ್ಥಾಪಕ ಅಧ್ಯಕ್ಷ ದಿವಂಗತ ಎನ್. ಮುತ್ತಪ್ಪ ರೈ ಅವರ ಹುಟ್ಟುಹಬ್ಬದ ಅಂಗವಾಗಿ ಹಗರಿಬೊಮ್ಮನಹಳ್ಳಿ ತಾಲೂಕಿನ ಜಯ ಕರ್ನಾಟಕ ಸಂಘಟನೆಯ ವತಿಯಿಂದ ಸರ್ಕಾರಿ ಸಾರ್ವಜನಿಕ ಆಸ್ಪತ್ರೆಯಲ್ಲಿ ಒಳರೋಗಿಗಳಿಗೆ ಹಾಲು ಹಾಗೂ ಬ್ರೆಡ್ ವಿತರಿಸಲಾಯಿತು.

ತಾಲೂಕು ಅಧ್ಯಕ್ಷ ದೇವರಮನಿ ನೀಲಪ್ಪ ಅವರ ನೇತೃತ್ವದಲ್ಲಿ ನಡೆದ ಈ ಸೇವಾ ಕಾರ್ಯಕ್ರಮವನ್ನು ಸರಳವಾಗಿ ಆಚರಿಸಲಾಯಿತು.

ಈ ಸಂದರ್ಭದಲ್ಲಿ ತಾಲೂಕು ಗೌರವಾಧ್ಯಕ್ಷ ಸಿ. ಪ್ರಕಾಶ್ ಮಾಲವಿ, ಬಸವರಾಜ್, ಹಡಪದ ಗಂಗಾಧರ್, ಮಾಲವಿ ಗ್ರಾಮ ಘಟಕದ ಅಧ್ಯಕ್ಷ ಅಭಿಷೇಕ್ ಬೋವಿ, ಗೌರವಾಧ್ಯಕ್ಷ ಸುಲ್ತಾನ್ ಸಾಹೇಬ್, ಉಪಾಧ್ಯಕ್ಷ ಕುಂಬಾರ ರೇವಣಸಿದ್ಧಪ್ಪ, ಪದಾಧಿಕಾರಿಗಳಾದ ಗಡ್ಡದ ನಾಗರಾಜ್, ಸಂತೋಷ್ ಸೇರಿದಂತೆ ಆಸ್ಪತ್ರೆಯ ಸಿಬ್ಬಂದಿ ಹಾಗೂ ಸಂಘಟನೆಯ ಕಾರ್ಯಕರ್ತರು ಉಪಸ್ಥಿತರಿದ್ದರು.

# ಮೋದಿ-ಅಮಿತ್ ಶಾ ನಾಯಕತ್ವಕ್ಕೆ ಜನರ ಭರ್ಜರಿ ಮನ್ನಣೆ

**■ ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**



ಪಂಚ ರಾಜ್ಯಗಳ ವಿಧಾನಸಭಾ ಚುನಾವಣಾ ಫಲಿತಾಂಶಗಳು ದೇಶದ ರಾಜಕೀಯ ಚಿತ್ರಣವನ್ನು ಹೊಸ ಹಂತಕ್ಕೆ ಕೊಂಡೊಯ್ದಿದ್ದು, ಪ್ರಧಾನಿ ನರೇಂದ್ರ ಮೋದಿ ಅವರ ನಾಯಕತ್ವಕ್ಕೆ ಜನರಿಂದ ಭರ್ಜರಿ ಬೆಂಬಲ ವ್ಯಕ್ತವಾಗಿದೆ ಎಂದು ಹಗರಿಬೊಮ್ಮನಹಳ್ಳಿ ಬಿಜೆಪಿ ಮುಖಂಡ ಹಾಗೂ ಜಿಲ್ಲಾ ಉಪಾಧ್ಯಕ್ಷ, 2023ರ ಅಭ್ಯರ್ಥಿ ಬಲಹುಣಸಿ ರಾಮಣ್ಣ ತಿಳಿಸಿದ್ದಾರೆ.

ಈ ಕುರಿತು ಮಾತನಾಡಿದ ಅವರು, ಭ್ರಷ್ಟಾಚಾರ ಮತ್ತು ಸಂವಿಧಾನ ಉಲ್ಲಂಘನೆಯ ಘಟನೆಗಳಿಂದ ಸುದ್ದಿಯಾಗಿದ್ದ ಪಶ್ಚಿಮ ಬಂಗಾಳದಲ್ಲಿಯೂ ಮತದಾರರು ಭಾರತೀಯ ಜನತಾ ಪಕ್ಷ ಹಾಗೂ ಪ್ರಧಾನಿ ನರೇಂದ್ರ ಮೋದಿ ಮತ್ತು ಅಮಿತ್ ಶಾ ಅವರ ನಾಯಕತ್ವಕ್ಕೆ ವ್ಯಾಪಕ ಬೆಂಬಲ ನೀಡಿದ್ದಾರೆ ಎಂದು ಹೇಳಿದರು.

ಅಸ್ಸಾಂ ಹಾಗೂ ಪುದುಚೇರಿಯಲ್ಲಿ ಬಿಜೆಪಿ ಅಧಿಕಾರ ಮುಂದುವರಿದಿರುವುದು ಪಕ್ಷದ ಬಲವನ್ನು ತೋರಿಸಿದ್ದು, ತಮಿಳುನಾಡು ಮತ್ತು ಕೇರಳದಲ್ಲಿಯೂ ಪಕ್ಷ ಅಮೂಲ್ಯ ಸಾಧನೆ ಮಾಡಿರುವುದು ಕಾರ್ಯಕರ್ತರಲ್ಲಿ ಹೊಸ ಉತ್ಸಾಹ ಮೂಡಿಸಿದೆ ಎಂದರು.

ಮುಂಬರುವ ದಿನಗಳಲ್ಲಿ ಭಾರತೀಯ ಜನತಾ ಪಕ್ಷ ದೇಶದ ಮನೆಮನೆಗಳಲ್ಲಿ ಬೆಳಗಲಿದ್ದು, ಪಂಚ ರಾಜ್ಯಗಳ ಚುನಾವಣಾ ಫಲಿತಾಂಶಗಳು 2028ರ ಕರ್ನಾಟಕ ವಿಧಾನಸಭೆ ಚುನಾವಣೆಗೆ ದಿಕ್ಸೂಚಿಯಾಗಲಿವೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ರೈತಪರ ಮತ್ತು ಜನಪರ ನಾಯಕ ಬಿ.ಎಸ್. ಯಡಿಯೂರಪ್ಪ ಅವರ ನಾಯಕತ್ವದಲ್ಲಿ ಮುಂದಿನ ಕರ್ನಾಟಕ ವಿಧಾನಸಭೆ ಚುನಾವಣೆಯಲ್ಲಿ ಬಿಜೆಪಿ 150ಕ್ಕೂ ಹೆಚ್ಚು ಸ್ಥಾನಗಳನ್ನು ಗೆಲ್ಲಲಿದೆ ಎಂದು ಹೇಳಿದರು.

ಇದೇ ವೇಳೆ, ಮೇ 9ರಂದು ಚಿತ್ರದುರ್ಗದಲ್ಲಿ ನಡೆಯಲಿರುವ ಬಿಎಸ್‌ವೈ ಅಭಿಮಾನೋತ್ಸವ ಕಾರ್ಯಕ್ರಮದಲ್ಲಿ ಹಗರಿಬೊಮ್ಮನಹಳ್ಳಿ ವಿಧಾನಸಭಾ ಕ್ಷೇತ್ರದಿಂದ ಸಾವಿರಾರು ಕಾರ್ಯಕರ್ತರು ಭಾಗವಹಿಸಲಿದ್ದಾರೆ ಎಂದು ಬಲಹುಣಸಿ ರಾಮಣ್ಣ ತಿಳಿಸಿದ್ದಾರೆ.

**2024-25ರಲ್ಲಿ 153.46 ಕೋಟಿ ಉಳಿತಾಯ; ಗ್ರಾಹಕರಿಗೆ ಪ್ರತಿ ಯೂನಿಟ್‌ಗೆ 10 ಪೈಸೆ ಮರುಪಾವತಿ-ಸೈಯದ್ ಅಜಂಪೀರ್ ಖಾದ್ರಿ**

# ಗ್ರಾಹಕರ ಸೇವೆಯೇ ನಮ್ಮ ಮೊದಲ ಆದ್ಯತೆ

**■ ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ**



ಇಂಧನ ಸಚಿವ ಕೆ.ಜೆ. ಜಾರ್ಜ್ ಅವರ ಮಾರ್ಗದರ್ಶನದಲ್ಲಿ ಹೆಸ್ಕಾಂ ಉತ್ತಮ ಕಾರ್ಯನಿರ್ವಹಣೆ ತೆ-ೂರಿದ್ದು, 2024-25ನೇ ಸಾಲಿನಲ್ಲಿ 153.46 ಕೋಟಿ ಉಳಿತಾಯ ಮಾಡಲಾಗಿದೆ. ಈ ಮೊತ್ತವನ್ನು ಗ್ರಾಹಕರಿಗೆ ಮರುಪಾವತಿಸಲಾಗುತ್ತಿದೆ ಎಂದು ಹೆಸ್ಕಾಂ ಅಧ್ಯಕ್ಷ ಸೈಯದ್ ಅಜಂಪೀರ್ ಎಸ್. ಖಾದ್ರಿ ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ವಿದ್ಯುತ್ ಖರೀದಿ ಹಾಗೂ ಪೂರೈಕೆಯನ್ನು ಸಮರ್ಪಕವಾಗಿ ನಿರ್ವಹಿಸಿದ ಪರಿಣಾಮ ಹೆಸ್ಕಾಂಗೆ ಉಳಿತಾಯ ಸಾಧ್ಯವಾಗಿದೆ ಎಂದರು. ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣ ಆಯೋಗ (ಕೆಇಆರ್‌ಸಿ) ಆದೇಶದ ಅನ್ವಯ 2024-25ನೇ ಆರ್ಥಿಕ ವರ್ಷದಲ್ಲಿ ಗ್ರಾಹಕರು ಬಳಸಿದ ನಿಜವಾದ ವಿದ್ಯುತ್ ಪ್ರಮಾಣದ ಆಧಾರದ ಮೇಲೆ ಪ್ರತಿ ಯೂನಿಟ್‌ಗೆ 10 ಪೈಸೆಯಂತೆ 2026-27ರಲ್ಲಿ ಮರುಪಾವತಿ ನೀಡಲಾಗುತ್ತದೆ ಎಂದು ತಿಳಿಸಿದರು.

ಈ ಮರುಪಾವತಿಯನ್ನು 12 ಸಮಾನ ಕಂತುಗಳಲ್ಲಿ ವಿದ್ಯುತ್ ಬಿಲ್ಲಿನ ಮೂಲಕ ಗ್ರಾಹಕರಿಗೆ ನೀಡಲಾಗುತ್ತಿದ್ದು, ಬಿಲ್‌ನಲ್ಲಿ "ಈಜ-25 ಖಿಡಿಣಜ ಗಿ ಋಚಿಡಿರಂಝ" ಎಂದು ಪ್ರತ್ಯೇಕವಾಗಿ ನಮೂದಿಸಲಾಗುತ್ತದೆ ಎಂದು ಹೇಳಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ರಾಜ್ಯ ಸರ್ಕಾರ ರೈತರ ಪರವಾಗಿ ಕಾರ್ಯನಿರ್ವಹಿಸುತ್ತಿದ್ದು, ರೈತರಿಗೆ ಹಗಲು ಹೊತ್ತಿನಲ್ಲಿಯೇ ಏಳು ಗಂಟೆಗಳ ವಿದ್ಯುತ್ ಪೂರೈಕೆ ಮಾಡಲು ಕುಸುಮ್-ಬಿ ಹಾಗೂ ಕುಸುಮ್-ಸಿ ಯೋಜನೆಗಳಿಗೆ ಹೆಚ್ಚಿನ ಒತ್ತು ನೀಡಲಾಗಿದೆ ಎಂದರು.

ಗ್ರಾಹಕರಿಗೆ 200 ಯೂನಿಟ್‌ವರೆಗೆ ಉಚಿತ ವಿದ್ಯುತ್ ನೀಡುವ ಗೃಹಜ್ಯೋತಿ ಯೋಜನೆ ಯಶಸ್ವಿಯಾಗಿ ಜಾರಿಯಲ್ಲಿದೆ. ಮುಖ್ಯಮಂತ್ರಿಗಳು ಹಾಗೂ ಇಂಧನ ಸಚಿವರ ಸಹಕಾರದೊಂದಿಗೆ ಹೆಸ್ಕಾಂ ಜನಪರವಾಗಿ ಕಾರ್ಯನಿರ್ವಹಿಸುತ್ತಿದ್ದು, ರೈತರ ಕೃಷಿ ಪಂಪ್‌ಸೆಟ್‌ಗಳಿಗೆ ಶೀಘ್ರ ವಿದ್ಯುತ್ ಸಂಪರ್ಕ ಕಲ್ಪಿಸಲು ನವೀಕೃತ ಶೀಘ್ರ ಸಂಪರ್ಕ ಯೋಜನೆಯನ್ನು ಕೂಡ ಜಾರಿಗೆ ತರಲಾಗಿದೆ ಎಂದು ಅವರು ತಿಳಿಸಿದ್ದಾರೆ.

# ಮೇ 13ರಂದು ಲಕ್ಷ್ಮೇಶ್ವರದಲ್ಲಿ ಲೋಕಾಯುಕ್ತ ಜನ ಸಂಪರ್ಕ ಸಭೆ

**■ ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ಲೋಕಾಯುಕ್ತ ಗದಗ ಕಚೇರಿಯ ಪೊಲೀಸ್ ಅಧಿಕಾರಿಗಳ ವತಿಯಿಂದ ಮೇ 13ರಂದು ಬುಧವಾರ ಬೆಳಿಗ್ಗೆ 10.30ರಿಂದ ಮಧ್ಯಾಹ್ನ 1 ಗಂಟೆಯವರೆಗೆ ಲಕ್ಷ್ಮೇಶ್ವರ ಪುರಸಭೆ ಕಾರ್ಯಾಲಯದಲ್ಲಿ ಲೋಕಾಯುಕ್ತ ಜನ ಸಂಪರ್ಕ ಸಭೆ ಹಾಗೂ ಸಾರ್ವಜನಿಕರಿಂದ ಅಹವಾಲು ಸ್ವೀಕಾರ ಕಾರ್ಯಕ್ರಮ ಆಯೋಜಿಸಲಾಗಿದೆ.

ಸಭೆಯಲ್ಲಿ ಸಾರ್ವಜನಿಕರಿಂದ ವಿವಿಧ ಸರ್ಕಾರಿ ಕಚೇರಿಗಳ ದುರಾಡಳಿತ, ಸಾರ್ವಜನಿಕ ಕೆಲಸಗಳಲ್ಲಿ ಉದ್ದೇಶಪೂರ್ವಕ ವಿಳಂಬ, ಸರ್ಕಾರದ ಯೋಜನೆಗಳ ಲಾಭ ವಿತರಣೆಯಲ್ಲಿ ತಾರತಮ್ಯ, ಕಾಮಗಾರಿಗಳಲ್ಲಿನ ಕಳಪೆ ನಿರ್ವಹಣೆ ಹಾಗೂ ಹಣ ದುರುಪಯೋಗ, ಅಕ್ರಮ ಸಂಭಾವನೆ (ಲಂಚ) ಬೇಡಿಕೆ ಸೇರಿದಂತೆ ವಿವಿಧ ವಿಷಯಗಳಿಗೆ ಸಂಬಂಧಿಸಿದ ದೂರುಗಳನ್ನು ಸ್ವೀಕರಿಸಲಾಗುವುದು.

ಸರ್ಕಾರಿ ಕಚೇರಿಗಳಲ್ಲಿ ಸಾರ್ವಜನಿಕರ ಕೆಲಸ ಕಾರ್ಯಗಳನ್ನು ನಿಗದಿತ ಅವಧಿಯಲ್ಲಿ ಮಾಡಿಕೊಡದೆ ಅನಗತ್ಯ ವಿಳಂಬ ಮಾಡುತ್ತಿರುವುದು, ಕರ್ತವ್ಯ ನಿರ್ವಹಣೆಯಲ್ಲಿ ನಿರ್ಲಕ್ಷ್ಯ ತೋರಿಸುವ ಅಧಿಕಾರಿಗಳ ವಿರುದ್ಧವೂ ಲಿಖಿತ ದೂರು ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ.

ಸಭೆಗೆ ಸರ್ಕಾರದ ವಿವಿಧ ಇಲಾಖೆಗಳ ತಾಲೂಕು ಮಟ್ಟದ ಅಧಿಕಾರಿಗಳು ಹಾಜರಿರಲಿದ್ದು, ಸಾರ್ವಜನಿಕರು ತಮ್ಮ ಕುಂದು-ಕೊರತೆಗಳು ಹಾಗೂ ಅಹವಾಲುಗಳನ್ನು ಅಗತ್ಯ ದಾಖಲಾತಿಗಳು ಮತ್ತು ಅಫಿಡವಿಟ್‌ನೊಂದಿಗೆ ಲಿಖಿತ ರೂಪದಲ್ಲಿ ಸಲ್ಲಿಸಬಹುದಾಗಿದೆ.

ಆದರೆ ನ್ಯಾಯಾಲಯದಲ್ಲಿ ವಿಚಾರಣೆ ಬಾಕಿ ಇರುವ ಪ್ರಕರಣಗಳಿಗೆ ಸಂಬಂಧಿಸಿದ ದೂರುಗಳನ್ನು ಸ್ವೀಕರಿಸಲಾಗುವುದಿಲ್ಲ ಎಂದು ಕರ್ನಾಟಕ ಲೋಕಾಯುಕ್ತ ಪೊಲೀಸ್ ಉಪಾಧೀಕ್ಷಕರು ವಿಜಯ ಬಿರಾದಾರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಚೀಟಿ ಎತ್ತುವ ಮೂಲಕ ಜಗಳೂರು ಕೊಟ್ರೇಶ್ ಆಯ್ಕೆ; ಹ್ಯಾಟಿ ಲೋಕಪ್ಪಗೆ ಅತಿ ಹೆಚ್ಚು ಮತ**

# ಶಿಕ್ಷಕರ ಸಂಘ ಚುನಾವಣೆಯಲ್ಲಿ ಸ್ಪಂದನಶೀಲ ತಂಡಕ್ಕೆ ಭರ್ಜರಿ ಗೆಲುವು



**■ ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

> ಚೀಟಿ ಎತ್ತುವ ಮೂಲಕ ಜಗಳೂರು ಕೊಟ್ರೇಶ್ ಆಯ್ಕೆ; ಹ್ಯಾಟಿ ಲೋಕಪ್ಪಗೆ ಅತಿ ಹೆಚ್ಚು ಮತ

ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ತಾಲೂಕು ಘಟಕದ ಚುನಾವಣೆಯಲ್ಲಿ ಪ್ರಾಮಾಣಿಕ ಸ್ಪಂದನಶೀಲ ತಂಡ ಭರ್ಜರಿ ಗೆಲುವು ಸಾಧಿಸಿದೆ.

ಪಟ್ಟಣದ ರಾಮನಗರ ಗುರುಭವನದಲ್ಲಿ ನಡೆದ ಚುನಾವಣೆಯಲ್ಲಿ ಬೆಳಿಗ್ಗೆ 8 ಗಂಟೆಯಿಂದ ಮತದಾನ ಪ್ರಕ್ರಿಯೆ ನಡೆಯಿತು. ಒಟ್ಟು 554 ಮತದಾರರ ಪೈಕಿ 492 ಮತಗಳು ಚಲಾವಣೆಯಾಗಿದ್ದು, ಸಂಜೆ 6 ಗಂಟೆಯಿಂದ ಮತ ಎಣಿಕೆ ಪ್ರಕ್ರಿಯೆ ಆರಂಭವಾಯಿತು.

ಚುನಾವಣೆಯಲ್ಲಿ ಪ್ರಾಮಾಣಿಕ ಸ್ಪಂದನಶೀಲ ತಂಡದ 10 ಅಭ್ಯರ್ಥಿಗಳು, ಪ್ರಾಮಾಣಿಕ ಸಮಾನ ಮನಸ್ಕರ ತಂಡದ 10 ಅಭ್ಯರ್ಥಿಗಳು ಹಾಗೂ ಇಬ್ಬರು ಸ್ವತಂತ್ರ ಅಭ್ಯರ್ಥಿಗಳು ಸೇರಿ ಒಟ್ಟು 22 ಮಂದಿ ಸ್ಪರ್ಧಿಸಿದ್ದರು. 10 ಸ್ಥಾನಗಳ ಪೈಕಿ ಮೂರು ಸ್ಥಾನಗಳು ಮಹಿಳೆಯರಿಗೆ ಮೀಸಲಾಗಿದ್ದರಿಂದ ಆರು ಮಹಿಳಾ ಅಭ್ಯರ್ಥಿಗಳು ಕಣದಲ್ಲಿದ್ದರು.

ಪ್ರಾಮಾಣಿಕ ಸ್ಪಂದನಶೀಲ ತಂಡದ ಹ್ಯಾಟಿ ಲೋಕಪ್ಪ 317 ಮತಗಳನ್ನು ಪಡೆದು ಅತಿ ಹೆಚ್ಚು ಮತಗಳೊಂದಿಗೆ ಜಯಗಳಿಸಿದರು. ಇದೇ ತಂಡದ ಬಿ. ಕೊಟ್ರಪ್ಪ (301), ಮೋಹನ್ ಅಣಜಿ (274), ಎಚ್.ಎಂ. ಬಸಯ್ಯ (225), ಜಗಳೂರು ಕೊಟ್ರೇಶ್ (208), ಮಹಿಳಾ ಅಭ್ಯರ್ಥಿಗಳಾದ ಸರೋಜಮ್ಮ (294) ಹಾಗೂ ದಾದೀಭಿ (292) ಗೆಲುವು ಸಾಧಿಸಿದರು.

ಪ್ರಾಮಾಣಿಕ ಸಮಾನ ಮನಸ್ಕರ ತಂಡದ ಇಟಗಿ ಪ್ರಭಾಕರ್ (278), ರುದ್ರೇಶ್ (208) ಹಾಗೂ ಕೆ.ಬಿ. ದೀಪಕ್ (254) ಆಯ್ಕೆಯಾದರು. ಸ್ವತಂತ್ರ ಅಭ್ಯರ್ಥಿಯಾಗಿ ಸ್ಪರ್ಧಿಸಿದ್ದ ಟಿ. ಸೋಮಶೇಖರ್ 211 ಮತಗಳನ್ನು ಪಡೆದು ಗೆಲುವು ಸಾಧಿಸಿದರು.

ಜಗಳೂರು ಕೊಟ್ರೇಶ್ ಹಾಗೂ ರುದ್ರೇಶ್ ಇಬ್ಬರೂ ಸಮಾನ ಮತ ಪಡೆದ ಹಿನ್ನೆಲೆ ಚೀಟಿ ಎತ್ತುವ ಮೂಲಕ ಫಲಿತಾಂಶ ನಿರ್ಧರಿಸಲಾಯಿತು. ಚೀಟಿ ಎತ್ತುವ ಪ್ರಕ್ರಿಯೆಯಲ್ಲಿ ಜಗಳೂರು ಕೊಟ್ರೇಶ್ ಆಯ್ಕೆಯಾದರು.

ಚುನಾವಣಾಧಿಕಾರಿಯಾಗಿ ಕೊಟ್ರು ದೇವರು ಕಾರ್ಯನಿರ್ವಹಿಸಿದರು. ನೌಕರರ ಸಂಘದ ಅಧ್ಯಕ್ಷ ಎಂ.ಪಿ.ಎಂ. ಮಂಜುನಾಥ್, ಶಿಕ್ಷಣ ಇಲಾಖೆಯ ಪರಮೇಶ್ವರಯ್ಯ ಸೊಪ್ಪಿನಮಠ ಸೇರಿದಂತೆ ಶಿಕ್ಷಕ ವೃಂದ ಉಪಸ್ಥಿತರಿದ್ದರು.

# ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನ

**■ ವಿಜಯಸಾಕ್ಷಿ ಸುದ್ದಿ, ಗದಗ**

ಎಸ್‌ಎಸ್‌ಎಲ್‌ಸಿ ರಾಜ್ಯ ಹಾಗೂ ಸಿಬಿಎಸ್‌ಸಿ, ಪಿಯುಸಿ ಆರ್ಟ್ಸ್, ಸೈನ್ಸ್ ಮತ್ತು ಕಾಮರ್ಸ್ ವಿಭಾಗಗಳಲ್ಲಿ ಶೇ.95ಕ್ಕಿಂತ ಹೆಚ್ಚು ಅಂಕಗಳನ್ನು ಪಡೆದ ಗದುಗಿನ ವಿವೇಕಾನಂದ ನಗರದ ವಿದ್ಯಾರ್ಥಿ-ವಿದ್ಯಾರ್ಥಿನಿಯರಿಗೆ ಪ್ರತಿಭಾ ಪುರಸ್ಕಾರ ನೀಡಲು ಶ್ರೀ ಸ್ವಾಮಿ ವಿವೇಕಾನಂದ ಸಾಂಸ್ಕೃತಿಕ ಸಮಿತಿಯು ಅರ್ಜಿ ಆಹ್ವಾನಿಸಿದೆ.

ಅರ್ಹ ವಿದ್ಯಾರ್ಥಿಗಳು ತಮ್ಮ ಅಂಕಪಟ್ಟಿಯ ಝೆರಾಕ್ಸ್ ಪ್ರತಿಯೊಂದಿಗೆ ಹೆಸರು, ಸಂಪರ್ಕ ವಿಳಾಸ ಹಾಗೂ ಮೊಬೈಲ್ ಸಂಖ್ಯೆಯನ್ನು ನಮೂದಿಸಿ ಮೇ 12ರೊಳಗೆ ಗದಗದ ವಿವೇಕಾನಂದ ನಗರದ ಶ್ರೀ ಕಾಶೀ ವಿಶ್ವನಾಥ ದೇವಸ್ಥಾನದಲ್ಲಿರುವ ಶ್ರೀ ಸ್ವಾಮಿ ವಿವೇಕಾನಂದ ಸಾಂಸ್ಕೃತಿಕ ಸಮಿತಿಯ ಕಾರ್ಯಾಲಯಕ್ಕೆ ಅರ್ಜಿ ಸಲ್ಲಿಸಬೇಕು ಎಂದು ಪ್ರಕಟಣೆ ತಿಳಿಸಿದೆ.

ಹೆಚ್ಚಿನ ಮಾಹಿತಿಗಾಗಿ ಬಿ.ಎಚ್. ಗರಡಿಮನಿ (9448059273) ಹಾಗೂ ವ್ಹಿ.ಆರ್. ಕುಲಕರ್ಣಿ (9449925045) ಅವರನ್ನು ಸಂಪರ್ಕಿಸಬಹುದು.

ಮೇ 16ರಂದು ಸಂಜೆ ಶ್ರೀ ಕಾಶೀ ವಿಶ್ವನಾಥ ದೇವಸ್ಥಾನದಲ್ಲಿ ನಡೆಯುವ "ಜೀವನ ದರ್ಶನ" ಕಾರ್ಯಕ್ರಮದಲ್ಲಿ ಪ್ರತಿಭಾ ಪುರಸ್ಕಾರ ಪ್ರದಾನ ಮಾಡಲಾಗುವುದು ಎಂದು ಸಮಿತಿಯ ಅಧ್ಯಕ್ಷ ಎ.ಟಿ. ನರೇಗಲ್ಲ ತಿಳಿಸಿದ್ದಾರೆ.

# ಡಿಪ್ಲೋಮಾ ಕೋರ್ಸ್‌ಗೆ ಅರ್ಜಿ ಆಹ್ವಾನ

**■ ವಿಜಯಸಾಕ್ಷಿ ಸುದ್ದಿ, ಗದಗ**

2026-27ನೇ ಸಾಲಿನ ಶೈಕ್ಷಣಿಕ ಅವಧಿಗೆ ಕೈಮಗ್ಗ ಮತ್ತು ಜವಳಿ ತಂತ್ರಜ್ಞಾನ ವಿಭಾಗದಲ್ಲಿ ಲ್ಯಾಟರಲ್ ಎಂಟ್ರಿ ಮೂಲಕ ನೇರವಾಗಿ 2ನೇ ವರ್ಷದ ಡಿಪ್ಲೋಮಾ (ಡಿ.ಹೆಚ್.ಟಿ.ಟಿ) ಕೋರ್ಸ್ ಪ್ರವೇಶಕ್ಕಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಒಟ್ಟು 26 ಪುರುಷ ಹಾಗೂ ಮಹಿಳಾ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುತ್ತದೆ. ವ್ಯಾಸಂಗದ ಅವಧಿಯಲ್ಲಿ ಮಾರ್ಗಸೂಚಿಯಂತೆ ಪ್ರತಿ ವಿದ್ಯಾರ್ಥಿಗೆ ಪ್ರತಿ ತಿಂಗಳು ರೂ.2,500 ಶಿಷ್ಯವೇತನ ನೀಡಲಾಗುವುದು. ಜೊತೆಗೆ ಆಯ್ಕೆಯಾದ ಅಭ್ಯರ್ಥಿಗಳಿಗೆ ಐ.ಐ.ಹೆಚ್.ಟಿ ನಿಯಮಾನುಸಾರ ವಸತಿ ನಿಲಯದ ಸೌಲಭ್ಯ ಕಲ್ಪಿಸಲಾಗುವುದು.

ಅಭ್ಯರ್ಥಿಗಳು ಗಣಿತ, ಭೌತಶಾಸ್ತ್ರ ಮತ್ತು ರಸಾಯನಶಾಸ್ತ್ರ ವಿಷಯಗಳೊಂದಿಗೆ 10+2 ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು ಅಥವಾ ಜವಳಿ ವಿಭಾಗದ ವೃತ್ತಿಪರ ವಿಭಾಗದಲ್ಲಿ 10+2 ಪಾಸಾಗಿರಬೇಕು. ಅಲ್ಲದೆ, 10ನೇ ತರಗತಿ ಹಾಗೂ 2 ವರ್ಷದ ಐಟಿಐ ಉತ್ತೀರ್ಣರಾಗಿರುವ ಅಭ್ಯರ್ಥಿಗಳು ಕೂಡ ಎರಡನೇ ವರ್ಷದ ಡಿಪ್ಲೋಮಾ ಕೋರ್ಸ್ ಪ್ರವೇಶಕ್ಕೆ ಅರ್ಹರಾಗಿರುತ್ತಾರೆ.

ಜವಳಿ ವಿಭಾಗದ ವೃತ್ತಿಪರ ಸ್ಟ್ರೀಮ್‌ನಲ್ಲಿ 10+2 ಅರ್ಹತೆ ಹೊಂದಿರುವ ಅಭ್ಯರ್ಥಿಗಳು ಐ.ಐ.ಹೆಚ್.ಟಿ ನಡೆಸುವ ಗಣಿತ, ಭೌತಶಾಸ್ತ್ರ ಮತ್ತು ರಸಾಯನಶಾಸ್ತ್ರ ವಿಷಯಗಳ ಬ್ರಿಡ್ಜ್ ಕೋರ್ಸ್ ಅಭ್ಯಾಸ ಮಾಡಬೇಕಾಗುತ್ತದೆ.

2026ರ ಜುಲೈ 1ರ ಅನ್ವಯ ಸಾಮಾನ್ಯ ವರ್ಗದ ಅಭ್ಯರ್ಥಿಗಳಿಗೆ ಗರಿಷ್ಠ 25 ವರ್ಷ ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ 27 ವರ್ಷ ವಯೋಮಿತಿ ನಿಗದಿಪಡಿಸಲಾಗಿದೆ. ಅರ್ಹತಾ ಪರೀಕ್ಷೆಯಲ್ಲಿ ಪಡೆದ ಒಟ್ಟು ಅಂಕಗಳ ಆಧಾರದ ಮೇಲೆ ಮೆರಿಟ್ ಪಟ್ಟಿ ಸಿದ್ಧಪಡಿಸಲಾಗುವುದು.

ಅರ್ಜಿ ನಮೂನೆಯನ್ನು ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆಯ ಅಧಿಕೃತ ವೆಬ್‌ಸೈಟ್ ಮೂಲಕ ಡೌನ್‌ಲೋಡ್ ಮಾಡಿಕೊಳ್ಳಬಹುದಾಗಿದೆ. ಅರ್ಜಿ ಸಲ್ಲಿಸಲು ಮೇ 30 ಕೊನೆಯ ದಿನಾಂಕವಾಗಿದೆ.

ಮೆರಿಟ್ ಆಧಾರದ ಮೇಲೆ ಆಯ್ಕೆಯಾದ ಅಭ್ಯರ್ಥಿಗಳನ್ನು ಸಂಬಂಧಿತ ಡಿಪ್ಲೋಮಾ ಸಂಸ್ಥೆಗಳಲ್ಲಿ ಕೌನ್ಸಿಲಿಂಗ್‌ಗೆ ಕರೆಯಲಾಗುವುದು. ಹೆಚ್ಚಿನ ಮಾಹಿತಿಗಾಗಿ ಪ್ರಾಂಶುಪಾಲರು, ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ನರಸಾಪೂರ, ಗದಗ-ಬೆಟಗೇರಿ ಅವರನ್ನು ಮೊಬೈಲ್ ಸಂಖ್ಯೆ 9916143619 ಅಥವಾ ಕಚೇರಿ ದೂರವಾಣಿ ಸಂಖ್ಯೆ 08372-259664 ಮೂಲಕ ಸಂಪರ್ಕಿಸಬಹುದಾಗಿದೆ.

ಪೂರ್ಣವಾಗಿ ಭರ್ತಿ ಮಾಡಿದ ಅರ್ಜಿಗಳನ್ನು ಅಗತ್ಯ ದಾಖಲೆಗಳೊಂದಿಗೆ ಪ್ರಾಂಶುಪಾಲರು, ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ನರಸಾಪೂರ, ಗದಗ-ಬೆಟಗೇರಿ-582102 ಇವರಿಗೆ ಸಲ್ಲಿಸಬೇಕು ಎಂದು ಕೈಮಗ್ಗ ಮತ್ತು ಜವಳಿ ಇಲಾಖೆ ನಿರ್ದೇಶಕರು ಹಾಗೂ ಜವಳಿ ಅಭಿವೃದ್ಧಿ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಮಂಗಗಳ ದಾರುಣ ಸ್ಥಿತಿ-ಮನಕಲುಕುವ ದೃಶ್ಯ ವೈರಲ್!**

# ನೀರಿಗಾಗಿ ಅಲೆದಾಡಿದ ಮಂಗಗಳು!



**■ ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲೆಯಲ್ಲಿ ದಿನದಿಂದ ದಿನಕ್ಕೆ ಬಿಸಿಲಿನ ತಾಪಮಾನ ಏರಿಕೆಯಾಗುತ್ತಿದ್ದು, ಮನುಷ್ಯರಷ್ಟೇ ಅಲ್ಲದೆ ಪ್ರಾಣಿ-ಪಕ್ಷಿಗಳೂ ನೀರಿಗಾಗಿ ಪರದಾಡುವ ಸ್ಥಿತಿ ನಿರ್ಮಾಣವಾಗಿದೆ. ಗದಗ ಜಿಲ್ಲೆಯ ಲಕ್ಷ್ಮೇಶ್ವರ ತಾಲೂಕಿನ ಹುಲ್ಲೂರು ಗ್ರಾಮದ ರಸ್ತೆಯಲ್ಲಿ ನೀರಿಗಾಗಿ ಮಂಗಗಳು ಪರದಾಡುತ್ತಿರುವ ದೃಶ್ಯ ಇದೀಗ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದೆ.

ಬೇಸಿಗೆಯ ತೀವ್ರತೆಯಿಂದಾಗಿ ನೀರು ಹಾಗೂ ಆಹಾರದ ಅಭಾವ ಎದುರಿಸುತ್ತಿರುವ ಎರಡು ಮಂಗಗಳು ರಸ್ತೆಯ ತಗ್ಗಿನಲ್ಲಿ ನಿಂತಿದ್ದ ನೀರನ್ನು ಕುಡಿಯುತ್ತಿರುವ ದೃಶ್ಯವನ್ನು ಸ್ಥಳೀಯರು ಮೊಬೈಲ್‌ನಲ್ಲಿ ಸೆರೆಹಿಡಿದಿದ್ದಾರೆ. ನೀರಿಗಾಗಿ ಅಲೆದಾಡುತ್ತಿದ್ದ ಮಂಗಗಳು ರಸ್ತೆ ಬದಿಯಲ್ಲಿ ನಿಂತಿದ್ದ ನೀರನ್ನೇ ಕುಡಿದು ದಾಹ ತೀರಿಸಿಕೊಂಡಿರುವುದು ಮನಕಲುಕುವಂತಿದೆ.

ಬಿರು ಬೇಸಿಗೆಯಿಂದ ಪ್ರಾಣಿ ಮತ್ತು ಪಕ್ಷಿಗಳಿಗೆ ನೀರಿನ ಕೊರತೆ ತೀವ್ರವಾಗುತ್ತಿದ್ದು, ಆಹಾರ ಮತ್ತು ನೀರಿಗಾಗಿ ಅಲೆದಾಡುವ ಪರಿಸ್ಥಿತಿ ನಿರ್ಮಾಣವಾಗಿದೆ. ಈ ದೃಶ್ಯ ಕಂಡ ಸಾರ್ವಜನಿಕರು ಪ್ರಾಣಿ-ಪಕ್ಷಿಗಳಿಗಾಗಿ ನೀರಿನ ವ್ಯವಸ್ಥೆ ಮಾಡುವಂತೆ ಮನವಿ ಮಾಡುತ್ತಿದ್ದಾರೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka